ಇನ್ನಷ್ಟು ಸ್ಥಳೀಯ ಸುದ್ದಿಗಳು ಪುಟ 09ರಲ್ಲಿ

ಕನ್ನಡಪ್ರಭ
ಬುಧವಾರ 6.05.2026

ಗರಿಷ್ಠ 34°c | ಕನಿಷ್ಠ 23°c

ಸುದ್ದಿ ಸಿಂಚನ

ಮೆಹಂದಿ, ರಂಗೋಲಿ ಮಹಿಳೆಯರಿಗೆ ಅತ್ಯಂತ ಪ್ರಿಯವಾದವು: ವಿನುತಾ

ಮದ್ದೂರು: ಮೆಹಂದಿ, ರಂಗೋಲಿ ಬಿಡಿಸುವುದೆಂದರೆ ಮಹಿಳೆಯರು ಮತ್ತು ವಿದ್ಯಾರ್ಥಿನಿಯರಿಗೆ ಎಲ್ಲಿಲ್ಲದ ಪ್ರೀತಿ ಎಂದು ಉದಯ್ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷೆ ವಿನುತಾ ಉದಯ್ ತಿಳಿಸಿದರು. ಮದ್ದೂರಮ್ಮ ಉತವದ ಅಂಗವಾಗಿ ಕಬಡ್ಡಿ, ವಾಲಿಬಾಲ್, ರಂಗೋಲಿ ಹಾಗೂ ಮೆಹಂದಿ ಸ್ಪರ್ಧೆಗಳ ವಿಜೇತರಿಗೆ ಪ್ರಶಸ್ತಿ ಪ್ರಮಾಣಪತ್ರ ವಿತರಿಸಿ ಮಾತನಾಡಿದ ಅವರು, ಪಟ್ಟಣದ ಎಲ್ಲಾ ಬೀದಿಗಳಲ್ಲಿ ರಾತ್ರಿ ವೇಳೆ ದೀಪಾಲಂಕಾರ ಮಾಡಿ ಹಬ್ಬವನ್ನು ಎಲ್ಲರ ಜೊತೆಗೂಡಿ ಆಚರಣೆ ಮಾಡಲಾಗುತ್ತಿದೆ ಎಂದರು. ಮೆಹಂದಿ ಸ್ಪರ್ಧೆಯಲ್ಲಿ 23 ವಾರ್ಡ್ ಗಳಿಂದ 53 ಜನ ಸ್ಪರ್ಧಿಸಿದ್ದು, ಪ್ರಥಮ , ದ್ವಿತೀಯ, ತೃತೀಯ ಸ್ಥಾನಗಳಲ್ಲಿ ಜಯಗಳಿಸಿದವರಿಗೆ ಪ್ರಶಸ್ತಿ ಪತ್ರ ವಿತರಿಸಿದರು.ರಂಗೋಲಿ ಸ್ಪರ್ಧೆಗೆ 60 ಜನರು ಭಾಗವಹಿಸಿದ್ದು, ಅಂತಿಮವಾಗಿ 3 ಜನರನ್ನು ಆಯ್ಕೆ ಮಾಡಿ ಉಳಿದ 10 ಮಂದಿ ಸಮಾಧಾನಕರ ಬಹುಮಾನಕ್ಕೆ ಭಾಜನರಾದರು. ಮೇ 6ರ ರಸಮಂಜರಿ ಕಾರ್ಯಕ್ರಮದಲ್ಲಿ ಬಹುಮಾನ ವಿತರಿಸಲಾಗುವುದು. ಕಾರ್ಯಕ್ರಮದಲ್ಲಿ ನಗರಸಭಾ ಮಾಜಿ ಅಧ್ಯಕ್ಷೆ ಕೋಕಿಲ ಅರುಣ್ ಕುಮಾರ್. ತಾಲೂಕು ಕಾಂಗ್ರೆಸ್ ಮಹಿಳಾ ಅಧ್ಯಕ್ಷೆ ಮಮತಾ ಶಂಕರೇಗೌಡ, ಮುಖಂಡರಾದ ಸಮಿನಾ, ಫೈರೋಜ್, ಆರಿಫ್, ಸೈಯದ್, ಟ್ರಸ್ಟಿಗಳಾದ ರವಿಕುಮಾರ್, ಸಿಪಾಯಿ ಶ್ರೀನಿವಾಸ್, ಯತೀಶ್, ಲೋಕೇಶ್, ಮುಖಂಡರಾದ ಶರತ್, ಮನ್ಸೂರ್‌ಖಾನ್, ವಿಜಯ್ ಕುಮಾರ್, ಮನ್ಸೂರ್ ಆಲಿಖಾನ್, ತೀರ್ಪುಗಾರರಾದ ಶಿಸು ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಅರುಣ್ ಕುಮಾರ್‌ಹಾಗೂ ಇಲಾಖೆ ಸಿಬ್ಬಂದಿ ಉಪಸ್ಥಿತರಿದ್ದರು.

ಎಸ್.ಎಂ.ಕೃಷ್ಣ ದತ್ತಿ ನಿಧಿಗೆ ರಘುವೀರ್‌ಗೌಡರಿಂದ 3 ಲಕ್ಷ ರುಪಾಯಿ ದೇಣಿಗೆ



ಮಂಡ್ಯ: ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣರ ಸ್ಮರಣಾರ್ಥ ಕರ್ನಾಟಕ ಸಂಘದಲ್ಲಿ ಸ್ಥಾಪಿಸಿರುವ ಎಸ್. ಎಂ. ಕೃಷ್ಣ ದತ್ತಿ ನಿಧಿಗೆ ಕಾಂಗ್ರೆಸ್ ಯುವ ಮುಖಂಡ ರಘುವೀರ್ ಎಸ್.ಗೌಡ ₹3 ಲಕ್ಷ ದೇಣಿಗೆ ನೀಡಿದ್ದಾರೆ. ಎಸ್.ಎಂ.ಕೃಷ್ಣರ ಅಭಿಮಾನಿಗಳು ಕರ್ನಾಟಕ ಸಂಘದಲ್ಲಿ ಕಳೆದ ವರ್ಷ ₹7 ಲಕ್ಷ ಮೊತ್ತದಲ್ಲಿ ಎಸ್.ಎಂ.ಕೃಷ್ಣ ದತ್ತಿ ನಿಧಿ ಸ್ಥಾಪಿಸಿದ್ದರು. ರಘುವೀರ್‌ಅವರು ಈ ದತ್ತಿ ನಿಧಿಗೆ ₹3 ಲಕ್ಷ ದೇಣಿಗೆ ನೀಡಿದ್ದು, ಈಗ ದತ್ತಿ ನಿಧಿ ಮೊತ್ತ ₹10 ಲಕ್ಷಕ್ಕೆ ಏರಿಕೆಯಾಗಿದೆ. ಎಸ್.ಎಂ.ಕೃಷ್ಣರ ಅಭಿಮಾನಿ ಆಗಿರುವ ರಾಜಾಜಿನಗರ ವಿಧಾನಸಭಾ ಕ್ಷೇತ್ರದ ರಘುವೀರ್‌ಎಸ್. ಗೌಡ ಅವರು ಕೆಪಿಸಿಸಿ ಬೆಂಗಳೂರು ಕೇಂದ್ರ ಪ್ರಚಾರ ಸಮಿತಿ ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಎಸ್.ಎಂ.ಕೃಷ್ಣ ಅವರು ಈ ನಾಡಿಗೆ ನೀಡಿರುವ ಕೊಡುಗೆಗಳು ಅವಿಸ್ಮರಣೀಯ. ಅವರ ಸಾಧನೆ ನಮಗೆ ದಾರಿದೀಪವಾಗಬೇಕು. ಅವರ ಹೆಸರು, ಸಾಧನೆ ನೆನೆಸಿಕೊಳ್ಳಬೇಕು ಎಂಬ ದೃಷ್ಟಿಯಿಂದ ದತ್ತಿ ನಿಧಿಗೆ ₹3 ಲಕ್ಷ ನೀಡಲಾಗಿದೆ ಎಂದು ಹೇಳಿದ್ದಾರೆ. ಶಿಕ್ಷಣ, ಆರೋಗ್ಯ, ಸಂಶೋಧನೆ, ಸಾಹಿತ್ಯ, ಕೃಷಿ ಹಾಗೂ ಸಮಾಜಮುಖಿ ಕಾರ್ಯಗಳಲ್ಲಿ ಸಾಧನೆ ಮಾಡಿದವರಿಗೆ ಎಸ್.ಎಂ.ಕೃಷ್ಣರ ಸ್ಮರಣಾರ್ಥವಾಗಿ ಪ್ರತಿ ವರ್ಷ ದತ್ತಿ ನಿಧಿಯಿಂದ ಪ್ರಶಸ್ತಿ ನೀಡಲಾಗುತ್ತಿದೆ.

ಕೃಷ್ಣರಾಜಸಾಗರ ಜಲಾಶಯ ನೀರಿನ ಮಟ್ಟ	
ಗರಿಷ್ಠ ಮಟ್ಟ	124.80 ಅಡಿ
ಇಂದಿನ ಮಟ್ಟ	92.07 ಅಡಿ
ಒಳಹರಿವು	97 ಕ್ಯುಸೆಕ್
ಹೊರಹರಿವು	1491 ಕ್ಯುಸೆಕ್
ನೀರಿನ ಸಂಗ್ರಹ	17.208 ಟಿಎಂಸಿ



ಮದ್ದೂರಮ್ಮ ಉತ್ಸವದ ಅಂಗವಾಗಿ ರಂಗೋಲಿ ಹಾಗೂ ಮೆಹಂದಿ ಸ್ಪರ್ಧೆಗಳ ವಿಜೇತರಿಗೆ ಉದಯ್ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷೆ ವಿನುತಾ ಉದಯ್ ಪ್ರಶಸ್ತಿ ಪ್ರಮಾಣಪತ್ರ ವಿತರಿಸಿದರು.



ಶ್ರೀರಂಗಪಟ್ಟಣದ ಕುವೆಂಪು ವೃತ್ತದಲ್ಲಿ ಶ್ರೀರಾಮ ಸೇನೆ ರಾಜ್ಯಾಧ್ಯಕ್ಷ ಪ್ರಮೋದ್ ಮುತಾಲಿಕ್ ಅವರನ್ನು ಹಿಂದೂ ಜಾಗರಣ ವೇದಿಕೆಯ ಕಾರ್ಯಕರ್ತರು ಅಭಿನಂದಿಸಿದರು.

ಜಿಲ್ಲಾ ಸಹಕಾರ ಒಕ್ಕೂಟದ ಆಡಳಿತ ಮಂಡಳಿಗೆ 24ರಂದು ಚುನಾವಣೆ ನಿಗದಿ

ಮಂಡ್ಯ: ಮಂಡ್ಯ ಜಿಲ್ಲಾ ಸಹಕಾರ ಒಕ್ಕೂಟ ನಿಗಮದ ಆಡಳಿತ ಮಂಡಳಿಗೆ ಪದಾಧಿಕಾರಿಗಳ ಚುನಾವಣ ಮೇ 24(ಭಾನುವಾರ) ರಂದು ನಡೆಯಲಿದೆ. ನಾಮಪತ್ರ ಸಲ್ಲಿಸಲು ಮೇ 16 ಕೊನೆ ದಿನವಾಗಿದೆ, ಮೇ 17 ರಂದು ನಾಮಪತ್ರ ಪರಿಶೀಲನೆ ನಡೆಯುತ್ತದೆ, ಮೇ 18ರಂದು ನಾಮಪತ್ರ ವಾಪಾಸ್ ಪಡೆಯಲು ಕೊನೆಯ ದಿನವಾಗಿದೆ. ಮೇ 24 ರಂದು ಬೆಳಗ್ಗೆ 9 ಗಂಟೆಯಿಂದ ಸಂಜೆ 4 ಗಂಟೆವರೆಗೆ ಚುನಾವಣೆ ನಡೆಸಲಾಗುತ್ತದೆ. ಅಂದು ಸಂಜೆಯೇ ಮತ ಎಣಿಕೆ ನಡೆಯುತ್ತದೆ ಎಂದು ಚುನಾವಣಾ ಅಧಿಕಾರಿ ಹಾಗೂ ಜಿಲ್ಲಾಧಿಕಾರಿಗಳಾದ ಡಾ. ಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸರ್ಕಾರಿ ಭೂಮಿ ಕಬಳಿಕೆ: 82 ಮಂದಿಗೆ ನೋಟಿಸ್

22 ಅಧಿಕಾರಿ ವರ್ಗ, 60 ಖಾಸಗಿ ವ್ಯಕ್ತಿಗಳಿಗೆ ವಿಚಾರಣೆಗೆ ಬುಲಾವ್ | ಕಂದಾಯ ಅಧಿಕಾರಿಗಳಿಂದ ತನಿಖಾಧಿಕಾರಿಗಳಿಗೆ ಮಾಹಿತಿ ನೀಡಲು ಹಿಂದೇಟು

• **ಮಂಡ್ಯ ಮಂಜುನಾಥ**
ಕನ್ನಡಪ್ರಭ ವಾರ್ತೆ ಮಂಡ್ಯ

ನಾಗಮಂಗಲ ತಾಲೂಕಿನಲ್ಲಿ ಸರ್ಕಾರಿ ಭೂಮಿ ಕಬಳಿಕೆಗೆ ಸಂಬಂಧಿಸಿದಂತೆ ಪೊಲೀಸರು 82 ಮಂದಿಗೆ ನೋಟಿಸ್ ಜಾರಿಗೊಳಿಸಿದ್ದಾರೆ. 22 ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಗೂ 60 ಮಂದಿ ಖಾಸಗಿ ವ್ಯಕ್ತಿಗಳಿಗೆ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ನೀಡಿದ್ದಾರೆ.

ಸರ್ಕಾರಿ ಭೂ ಕಬಳಿಕೆ ಪ್ರಕರಣದ ವ್ಯಾಪ್ತಿ ವಿಸ್ತಾರಗೊಂಡಿದ್ದರಿಂದ ಎಸ್‌ಐಟಿ ಅಥವಾ ಸಿಐಡಿ ತನಿಖೆಗೆ ಒಪ್ಪಿಸುವ ನಿರ್ಧಾರಕ್ಕೆ ಪೊಲೀಸರು ಬಂದು ಡಿಜಿಪಿ ಅವರಿಗೂ ಪತ್ರ ಬರೆದಿದ್ದರು. ಆದರೆ, ಪೊಲೀಸ್ ಇಲಾಖೆಯಿಂದಲೇ ತನಿಖೆ ನಡೆಸುವಂತೆ ಹಿರಿಯ ಅಧಿಕಾರಿಗಳು ಸೂಚಿಸಿದ್ದರ ಮೇರೆಗೆ ಮತ್ತೆ ತನಿಖೆ ಪೊಲೀಸರ ಹೆಗಲೇರಿದೆ.

ಭೂ ಕಬಳಿಕೆ ಪ್ರಕರಣದಲ್ಲಿ ಸಕಾಲದಲ್ಲಿ ಮಾಹಿತಿಗಳನ್ನು ತನಿಖಾಧಿಕಾರಿಗಳಿಗೆ ನೀಡಲು ಕಂದಾಯ ಇಲಾಖೆ ಅಧಿಕಾರಿಗಳು ಹಿಂದೇಟು ಹಾಕುತ್ತಿದ್ದಾರೆ. ಇದು ತನಿಖೆ ನಿರೀಕ್ಷಿತ ಪ್ರಗತಿ ಕಾಣದಿರುವುದಕ್ಕೆ ಪ್ರಮುಖ ಕಾರಣವಾಗಿದೆ ಎಂಬ ಆರೋಪಗಳು ಕೇಳಿಬರುತ್ತಿವೆ. ಪೊಲೀಸರು ಕೇಳಿದ ಮಾಹಿತಿಯನ್ನು ಸಕಾಲದಲ್ಲಿ ಒದಗಿಸುವುದಕ್ಕೆ ತಾಲೂಕು ಕಚೇರಿ ಅಧಿಕಾರಿಗಳನ್ನೊಳಗೊಂಡ ಸಮಿತಿ ರಚಿಸಿ ತನಿಖೆಗೆ ಸಹಕರಿಸುವಂತೆ ತಹಸೀಲ್ದಾರ್‌ಅವರನ್ನು ಕೋರಿದ್ದರೂ ಇದುವರೆಗೂ ಅವರಿಂದ ಸ್ಪಂದನೆಯೇ ದೊರಕಿಲ್ಲ. ಪ್ರತಿಯೊಂದು ಮಾಹಿತಿ ನೀಡುವುದಕ್ಕೂ ಅನಗತ್ಯ ವಿಳಂಬ ಮಾಡುತ್ತಿರುವ ಬಗ್ಗೆ ದೂರುಗಳು ವ್ಯಕ್ತವಾಗುತ್ತಿವೆ.

ತಹಸೀಲ್ದಾರ್‌ಮಾಹಿತಿ ನೀಡಲು ಹಿಂದೇಟು ಹಾಕುತ್ತಿರುವ ವಿಷಯವನ್ನು ಜಿಲ್ಲಾಧಿಕಾರಿಗಳ ಗಮನಕ್ಕೂ ತನಿಖಾಧಿಕಾರಿಗಳು ತಂದಿದ್ದು, ಜಿಲ್ಲಾಧಿಕಾರಿ ಡಾ.ಕುಮಾರ ಅವರು ತನಿಖೆಗೆ ಅಗತ್ಯವಿರುವ ಎಲ್ಲಾ ಮಾಹಿತಿಯನ್ನು ದೊರಕಿಸಿಕೊಡುವ ಭರವಸೆ ನೀಡಿದ್ದಾರೆ ಎಂದು ಹೇಳಲಾಗಿದೆ.

2020ರ ನಂತರ ದಾಖಲೆ ಪ್ರಕ್ರಿಯೆ ಆರಂಭ: ಸರ್ಕಾರಿ ಜಮೀನು ಸೇರಿದಂತೆ ಅರಣ್ಯ ಇಲಾಖೆ ಜಮೀನುಗಳಲ್ಲಿ ಸಾಗುವಳಿ ಮಾಡುವುದು ಹಿಂದಿನಿಂದಲೂ ನಡೆದುಕೊಂಡು ಬಂದಿತ್ತು. ಆ ಜಮೀನನ್ನು ಅಧಿಕೃತವಾಗಿ ತಮ್ಮ ಹೆಸರಿಗೆ ದಾಖಲೆ ಮಾಡಿಕೊಳ್ಳಬೇಕೆಂಬ ಆಲೋಚನೆ ಅಲ್ಲಿಯವರೆಗೂ ಯಾರಿಗೂ ಬಂದಿರಲಿಲ್ಲ. 2020ರಲ್ಲಿ ಜಮೀನನ್ನು ತಮ್ಮ ಹೆಸರಿಗೆ ದಾಖಲೆ ಮಾಡಿಕೊಳ್ಳಬೇಕೆಂಬ ಪ್ರಕ್ರಿಯೆ ಆರಂಭಗೊಂಡಿತು.

ತುಂಡು ಭೂಮಿ ಇಲ್ಲದವರೂ ಒಂದು ಎಕರೆ, ಎರಡುಎಕರೆಜಮೀನಿನಒಡೆಯರಾಗುತ್ತಿರುವುದನ್ನು ಕಂಡು ಸಾಗುವಳಿ ಮಾಡುತ್ತಿದ್ದವರು ಭೂಮಿಯನ್ನು ತಮ್ಮ ಹೆಸರಿಗೆಮಾಡಿಸಿಕೊಳ್ಳುವುದಕ್ಕೆಮುಂದಾದರು. ನಿಧಾನಗತಿಯಲ್ಲಿ ಈ ಪ್ರಕ್ರಿಯೆ ಆರಂಭಗೊಂಡಿತು, ಸರ್ಕಾರಿ ಭೂಮಿಯಲ್ಲಿ ಸಾಗುವಳಿ ಮಾಡುವವರಿಗೆ, ಖಾಸಗಿ ವ್ಯಕ್ತಿಗಳಿಗೆ ಅಧಿಕಾರಿಗಳು ಮತ್ತು ಸಿಬ್ಬಂದಿಯ ಸಹಕಾರದೊಂದಿಗೆ ನಕಲಿ ದಾಖಲೆಗಳನ್ನು ಸೃಷ್ಟಿಸಿ ಖಾತೆ ಮಾಡಿಕೊಡುವ ತಂಡವೊಂದು ಹುಟ್ಟಿಕೊಂಡಿತು.

ಕಳೆದೊಂದು ವರ್ಷದಿಂದ ಚುರುಕು: ಹೀಗೆ ನಕಲಿ ದಾಖಲೆಗಳನ್ನು ಸೃಷ್ಟಿಸುವುದು, ರೆಕಾರ್ಡ್ ರೂಂ, ಭೂಮಿ ಮತ್ತು ದರಖಾಸ್ತು ಇಲಾಖೆ ಹಾಗೂ ತಾಲೂಕು ಕಚೇರಿಯಲ್ಲಿರಬೇಕಾದ ಪ್ರಮುಖ ಕಡತಗಳು ಅಧಿಕಾರಿಗಳು- ಸಿಬ್ಬಂದಿ ಮನೆಗಳು, ಹೋಟೆಲ್ ರೂಮ್‌ಗಳನ್ನು ಸೇರಿಕೊಂಡವು. ಅಲ್ಲಿ ದಾಖಲೆಗಳನ್ನು ತಿದ್ದುವುದು, ನಕಲಿ ಸಾಗುವಳಿ ಚೀಟಿಗಳನ್ನು ಸೃಷ್ಟಿಸುವುದು, ತಹಸೀಲ್ದಾರ್, ಕಂದಾಯ ನಿರೀಕ್ಷಕರು, ಗ್ರಾಮ ಲೆಕ್ಕಾಧಿಕಾರಿಗಳ ಸೀಲ್, ನಕಲಿ ಸಹಿಗಳನ್ನು ಮಾಡಿ ಆ ದಾಖಲೆಗಳನ್ನು ಸದ್ದಿಲ್ಲದೆ ಅಭಿಲೇಖಾಲಯದ ದಾಖಲೆಗಳೊಂದಿಗೆ ಸೇರಿಸುವುದು ನಡೆಯಲಾರಂಭಿಸಿತು. ಇವೆಲ್ಲವೂ 1 ವರ್ಷದಲ್ಲಿ ಚುರುಕಾಗಿ ನಡೆದುಕೊಂಡು ಬಂದವು. ನಾಗಮಂಗಲ ಪಟ್ಟಣದ ಎಚ್.ಎನ್.ಕಾವಲ್‌ನಲ್ಲಿ ಅತಿ ಹೆಚ್ಚು ಸರ್ಕಾರಿ ಭೂಮಿ ಖಾಸಗಿಯವರಿಗೆ ವರ್ಗಾವಣೆಯಾಗಿರುವುದಾಗಿ ಹೇಳಲಾಗಿದೆ.

ರಾಜಕೀಯ ಪ್ರಭಾವಿಗಳು, ಮುಖಂಡರು ಸರ್ಕಾರಿ ಭೂ ಕಬಳಿಕೆ ಹಿಂದೆ ನಿಂತಿದ್ದಾರೆ. ಯಾರ ಅರಿವಿಗೂಬಾರದಂತೆಸದ್ದಿಲ್ಲದೆ ಪ್ರಕ್ರಿಯೆ ನಡೆದುಕೊಂಡು ಬರುತ್ತಿತ್ತು.

ಲೋಕಾ ದಾಳಿ ತಂದ ಯಡವಟ್ಟು: ಇದರ ನಡುವೆಯೇ ಸಾರ್ವಜನಿಕರಿಂದ ಬಂದ ದೂರನ್ನು ಆಧರಿಸಿ ಲೋಕಾಯುಕ್ತ ಅಧಿಕಾರಿಗಳು ದಿಢೀರನೆ ದಾಳಿ ನಡೆಸಿ ಸರ್ಕಾರಿ ಭೂಮಿ ಕಬಳಿಕೆಯಾಗುತ್ತಿರುವ ಪ್ರಕರಣವನ್ನು ಬಯಲಿಗೆಳೆದರು. ಇಲ್ಲಿ ಆದ ಒಂದು ಯಡವಟ್ಟೆಂದರೆ ಸುಮಾರು 200ಕ್ಕೂ ಹೆಚ್ಚು ಆರ್‌ಟಿಸಿಗಳು ಇನ್ನು ಒಂದೆರಡು ತಿಂಗಳೊಳಗೆ ಮಾಲೀಕರ ಹೆಸರಿಗೆ ದಾಖಲಾಗುತ್ತಿದ್ದವು. ಎಲ್ಲಾ ಪ್ರಕ್ರಿಯೆ ಪೂರ್ಣಗೊಂಡು ಸರ್ಕಾರಿ ಭೂಮಿ ಖಾಸಗಿ ವ್ಯಕ್ತಿಗಳ ಹೆಸರಿಗೆ ದಾಖಲಾಗುವ ಪ್ರಕ್ರಿಯೆಯಷ್ಟೇ ಬಾಕಿ ಉಳಿದಿತ್ತು. ಆದರೆ, ಆರ್‌ಟಿಸಿಗಳು ಅಧಿಕೃತವಾಗಿ ವ್ಯಕ್ತಿಗಳ ಹೆಸರಿಗೆ ದಾಖಲಾಗುವ ಮುನ್ನವೇ ಲೋಕಾಯುಕ್ತ ಅಧಿಕಾರಿಗಳ ದಾಳಿ ನಡೆದಿರುವುದರಿಂದ ಇದರ ಹಿಂದಿರುವ ವ್ಯಕ್ತಿಗಳನ್ನು ಪತ್ತೆ ಹಚ್ಚುವುದೇಪೊಲೀಸರಿಗೆ ಸವಾಲಾಗಿ ಪರಿಣಮಿಸಿದೆ.

700 ಜನರಿಗೆ ನೋಟಿಸ್ ನೀಡಲು ಸಿದ್ಧತೆ

ಸರ್ಕಾರಿ ಭೂ ಕಬಳಿಕೆ ಪ್ರಕರಣದಲ್ಲಿ 700 ಜನರಿಗೆ ನೋಟೀಸ್ ಜಾರಿಗೊಳಿಸುವುದಕ್ಕೆ ಪೊಲೀಸರು ಸಿದ್ಧತೆ ನಡೆಸಿದ್ದಾರೆ. ಹಾಗೆಂದ ಮಾತ್ರಕ್ಕೆ ಅವರೆಲ್ಲರೂ ಆರೋಪಿಗಳೆಂದೇನೂ ಅಲ್ಲ. ಪ್ರಕರಣಕ್ಕೆ ಸಂಬಂಧಿಸಿದಂತೆ ಕೆಲವೊಂದು ಮಾಹಿತಿಗಳನ್ನು ಪಡೆಯುವುದು ಪೊಲೀಸರಿಗೆ ಅಗತ್ಯವಾಗಿದೆ. ಅದರಲ್ಲಿ ಬಹುತೇಕರನ್ನು ಸಾಕ್ಷೀದಾರರನ್ನಾಗಿ ಮಾಡಿಕೊಳ್ಳುವ ಸಾಧ್ಯತೆಗಳಿವೆ. ಅದಕ್ಕಾಗಿ ಪಟ್ಟಿಯನ್ನು ತಯಾರಿಸಿಕೊಂಡು ಅವರನ್ನು ವಿಚಾರಣೆಗೆ ಕರೆಯುವುದಕ್ಕೆ ಕಾರ್ಯೋನ್ಮುಖರಾಗಿದ್ದಾರೆ.

ಎಚ್.ಎನ್.ಕಾವಲ್ ಪ್ರದೇಶದ ಸರ್ಕಾರಿ ಭೂ ಕಬಳಿಕೆ ಪ್ರಕರಣದಲ್ಲಿ ಒಂದು ಸಮುದಾಯಕ್ಕೆ ಸೇರಿದವರೇ ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಇನ್ನು ತಾಲೂಕಿನ ವಿವಿಧೆಡೆ ಕಾಂಗ್ರೆಸ್, ಜೆಡಿಎಸ್ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಮುಖಂಡರು, ಪ್ರಭಾವಿಗಳು, ಉದ್ಯಮಿಗಳು ಕೂಡ ಸರ್ಕಾರಿ ಭೂಮಿಯನ್ನು ಪಡೆದುಕೊಂಡಿದ್ದಾರೆಂಬ ಮಾತು ಸಾರ್ವಜನಿಕ ವಲಯದಲ್ಲಿ ಜನಜನಿತವಾಗಿದೆ. ಪ್ರಕರಣದ ಪ್ರಮುಖ ಆರೋಪಿ ಎನ್ನಲಾದ ನಾಗಮಂಗಲ ಪಟ್ಟಣದ ಮಹಮದ್ ವಾಸಿಕುಲ್ಲಾ ಎಂಬಾತ ವಿದೇಶಕ್ಕೆ ಪರಾರಿಯಾಗಿದ್ದು, ಆತನನ್ನು ಸೆರೆಹಿಡಿಯುವುದು ದೂರದ ಮಾತೇ ಆಗಿದೆ.

ಜಿಲ್ಲಾ ಮಟ್ಟದಲ್ಲಿ ಎಸ್‌ಐಟಿ ರಚನೆ ಅಗತ್ಯ

ಸರ್ಕಾರಿ ಭೂ ಕಬಳಿಕೆ ಪ್ರಕರಣದ ಪೊಲೀಸ್ ತನಿಖೆ ಚುರುಕಾಗಿ ನಡೆಯಬೇಕಾದರೆ ಜಿಲ್ಲಾಮಟ್ಟದಲ್ಲಿ ಉನ್ನತಾಧಿಕಾರಿಗಳನ್ನೊಳಗೊಂಡ ಎಸ್‌ಐಟಿ ತಂಡವೊಂದನ್ನು ರಚಿಸುವ ಅಗತ್ಯವಿದೆ ಎಂಬ ಮಾತುಗಳು ಕೇಳಿಬರುತ್ತಿವೆ. ಏಕೆಂದರೆ, ಈ ಪ್ರಕರಣದಲ್ಲಿ ಕಂದಾಯ, ಸರ್ವೆ, ಅರಣ್ಯ, ಪರಿಸರ ಸೇರಿದಂತೆ ಹಲವು ಇಲಾಖೆಗಳು ತನಿಖಾ ವ್ಯಾಪ್ತಿಯೊಳಗೆ ಸೇರುವುದರಿಂದ ತನಿಖಾ ವ್ಯಾಪ್ತಿ ವಿಸ್ತಾರಗೊಳ್ಳುತ್ತಲೇ ಇದೆ. ಎಲ್ಲಾ ಇಲಾಖೆಗಳಿಗೂ ಪೊಲೀಸರು ಮಾಹಿತಿ ಕೋರಿ ಪತ್ರ ಬರೆದುಕೊಂಡು ಕೂರುವುದಕ್ಕೆ ಸಾಧ್ಯವಿಲ್ಲ.ಅದಕ್ಕಾಗಿ ಜಿಲ್ಲಾಧಿಕಾರಿ ನೇತೃತ್ವದಲ್ಲಿ ಅಪರ ಜಿಲ್ಲಾಧಿಕಾರಿ, ಉಪವಿಭಾಗಾಧಿಕಾರಿಗಳು ಸೇರಿದಂತೆ ಉನ್ನತಾಧಿಕಾರಿಗಳ ನೇತೃತ್ವದ ವಿಶೇಷ ತಂಡ ರಚಿಸಿ ಪೊಲೀಸರಿಗೆ ವಿವಿಧ ಇಲಾಖೆಗಳಿಗೆ ತನಿಖೆಗೆ ಅಗತ್ಯವಿರುವ ಮಾಹಿತಿಯನ್ನು ಸರಿಯಾದ ಸಮಯಕ್ಕೆ ಒದಗಿಸಿದರೆ ತನಿಖೆ ಮತ್ತಷ್ಟು ಚುರುಕುಗೊಂಡ ುಬೇಗನೆಪೂರ್ಣಗೊಳ್ಳಲಿದೆಎಂಬುದುಸಾರ್ವಜನಿಕವಲಯದಲ್ಲಿಕೇಳಿಬರುತ್ತಿರುವ ಮಾತಾಗಿದೆ.

ದಾಖಲೆಗಳನ್ನೇ ತಿದ್ದದೆ ಅಕ್ರಮ ಪರಭಾರೆ

1982ರಿಂದ ಇಲ್ಲಿಯವರೆಗೂ ಭೂಮಿಗೆ ಸಂಬಂಧಿಸಿದಂತೆ ಒಂದೇ ರಿಜಿಸ್ಟರ್‌ನಲ್ಲಿ ನಿರ್ವಹಣೆ ಮಾಡಿಕೊಂಡು ಬರಲಾಗಿದೆ. ಅಲ್ಲಿಂದಲೂ ಸರ್ಕಾರಿ ಭೂಮಿಯನ್ನು ಖಾಸಗಿಯವರಿಗೆ ಪರಭಾರೆ ಮಾಡಿರುವುದು ಕಂಡುಬಂದಿರುವುದಾಗಿ ತಿಳಿದುಬಂದಿದೆ.

ಸರ್ಕಾರಿ ಭೂ ಕಬಳಿಕೆಗೆ ಸಂಬಂಧಿಸಿದ ಕೆಲವೊಂದು ಪ್ರಕರಣಗಳಲ್ಲಿ ದಾಖಲೆಗಳನ್ನೇ ತಿದ್ದದೆ ರಿಜಿಸ್ಟರ್‌ಮೂಲಕವೇ ನೇರವಾಗಿ ಖಾಸಗಿ ವ್ಯಕ್ತಿಗಳ ಹೆಸರಿಗೆ ಪರಭಾರೆ ಮಾಡಿರುವುದೂ ಕಂಡುಬಂದಿದೆ. ಭೂ ದಾಖಲೆ ರಿಜಿಸ್ಟರ್‌ನಲ್ಲಿ ಅಪೂರ್ಣ ವಿವರಗಳನ್ನು ದಾಖಲಿಸಿ ಬಿಡಲಾಗಿದೆ. ಕೆಲವೊಂದು ಕಡೆ ಹಳೆಯ ಇಂಕ್‌ನ್ನು ಬಳಸಿ ಬರೆದಿದ್ದರೆ, ಮತ್ತೊಂದು ಕಡೆ ಹೊಸ ಇಂಕ್ ಗಳಲ್ಲಿ ನಮೂದು ಮಾಡಲಾಗಿದೆ. ಇದನ್ನು ಬರೆದವರು ಯಾರು, ಆ ಸಮಯದಲ್ಲಿ ಕಂದಾಯಾಧಿಕಾರಿ, ಗ್ರಾಮ ಆಡಳಿತಾಧಿಕಾರಿ, ತಹಸೀಲ್ದಾರ್‌ಆಗಿದ್ದವರು ಯಾರು ಎನ್ನುವುದು ಕಂಡುಹಿಡಿಯುವುದು ಪೊಲೀಸರಿಗೆ ತಲೆನೋವಾಗಿದೆ.

ಹೈನುಗಾರಿಕೆಯಿಂದ ಸ್ವಾವಲಂಬಿ ಬದುಕು: ಉದಯ್

ಕೂಳಗೆರೆ ಗ್ರಾಮದಲ್ಲಿ ಶಾಸಕರಿಂದ ಹೈನುಗಾರರಿಗೆ ರಬ್ಬರ್‌ಮ್ಯಾಟ್, ಮೇವು ಕತ್ತರಿಸುವ ಯಂತ್ರ ವಿತರಣೆ

• **ಕನ್ನಡಪ್ರಭ ವಾರ್ತೆ** ಮದ್ದೂರು

ರೈತರ ಬದುಕಿಗೆ ಆಸರೆಯಾಗಿರುವ ಹೈನುಗಾರಿಕೆಯಿಂದ ಸ್ವಾವಲಂಬಿ ಬದುಕು ಕಂಡುಕೊಂಡು ಆರ್ಥಿಕವಾಗಿ ಸಬಲರಾಗುತ್ತಿರುವುದು ಉತ್ತಮ ಬೆಳವಣಿಗೆ ಎಂದು ಶಾಸಕ ಕೆ.ಎಂ.ಉದಯ್ ತಿಳಿಸಿದರು.

ತಾಲೂಕಿನ ಸೋಮನಹಳ್ಳಿ ಜಿಪಂ ವ್ಯಾಪ್ತಿಯ ಕೂಳಗೆರೆ ಗ್ರಾಮದ ಎಂಪಿಸಿಎಸ್ ಕಚೇರಿ ಆವರಣದಲ್ಲಿ ಪಶು ವೈದ್ಯಕೀಯ ಸೇವೆ, ಪಶುಪಾಲನಾ ಇಲಾಖೆ, ಜಿಲ್ಲಾ ಹಾಲು ಒಕ್ಕೂಟ ಹಾಗೂ ಹಾಲು ಉತ್ಪಾದಕರ ಸಹಕಾರ ಸಂಘದ ವತಿಯಿಂದ ಆಯೋಜಿಸಿದ್ದ ರಬ್ಬರ್‌ಮ್ಯಾಟ್, ಮೇವು ಕತ್ತರಿಸುವ ಯಂತ್ರ ವಿತರಣೆ ಹಾಗೂ ರಾಸುಗಳ ಆರೋಗ್ಯ ತಪಾಸಣಾ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಗ್ರಾಮೀಣ ಭಾಗದ ಮಹಿಳೆಯರು ಹೈನುಗಾರಿಕೆಯನ್ನೇ ನಂಬಿ ಕುಟುಂಬ ನಿರ್ವಹಣೆ, ಮಕ್ಕಳ ಶಿಕ್ಷಣ ಹಾಗೂ ಇನ್ನಿತರೆ ಬದುಕಿಗೆ ಆಸರೆಯಾಗಿ ಮುಂಚೂಣಿಯಲ್ಲಿರುವುದು ಸಂತಸದ ವಿಚಾರ. ಹೈನುಗಾರಿಕೆ ಉದ್ಯಮ ಬಹು ಎತ್ತರಕ್ಕೆ ಬೆಳೆದು ಸ್ಥಳೀಯರಿಗೆ ಉದ್ಯೋಗ ಕಲ್ಪಿಸುವಂತಾಗಬೇಕು ಎಂದರು.



ಸ್ಥಳೀಯ ಸಹಕಾರ ಸಂಘಗಳಲ್ಲಿ ಕೆಲ ಕಾರ್ಯದರ್ಶಿಗಳು ಮತ್ತು ಆಡಳಿತ ಮಂಡಳಿಗಳ ಸದಸ್ಯರೊಟ್ಟಿಗೆ ಶಾಮೀಲಾಗಿ ಹಲವು ಅಕ್ರಮ ಮತ್ತು ಹಣ ದುರುಪಯೋಗ ಮಾಡುವ ಪ್ರಕರಣಗಳು ಸಾಕಷ್ಟು ಜರುಗುತ್ತಿವೆ. ಇದರಿಂದ ಸಂಘಗಳು ಆರ್ಥಿಕವಾಗಿ ನಷ್ಟ ಅನುಭವಿಸಲು ಕಾರಣವಾಗಿವೆ ಎಂದು ತಿಳಿಸಿದರು.

ಮುಂದಿನ ದಿನಗಳಲ್ಲಿ ಅಧಿಕಾರಿಗಳು ಮತ್ತು ಸಂಘ- ಸಂಸ್ಥೆ ಕಾರ್ಯದರ್ಶಿಗಳು ಯಾವುದೇ ಮುಲಾಜಿಗೆ ಒಳಗಾಗದೆ ಸರ್ಕಾರದ ಸೌಲಭ್ಯಗಳನ್ನು ಒದಗಿಸಬೇಕು. ಇಲ್ಲದಿದ್ದರೆ ಕ್ರಮ ಅನಿವಾರ್ಯ ಎಂದು ಎಚ್ಚರಿಸಿದರು.

ರಬ್ಬರ್‌ಮ್ಯಾಟ್, ಮೇವು ಕತ್ತರಿಸುವ ಯಂತ್ರ, ಹಾಲು ಕರೆಯುವ ಯಂತ್ರಗಳನ್ನು ಶೇ.50 ರಷ್ಟು ರಿಯಾಯ್ತಿ ದರಲ್ಲಿ ವಿತರಿಸಲಾಗುತ್ತಿದೆ, ರೈತರು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಡಿಸಿಸಿ ಬ್ಯಾಂಕ್ ನಿರ್ದೇಶಕ ಪಿ. ಸಂದರ್ಶ ಮಾತನಾಡಿ, ಡಿಸಿಸಿ ಬ್ಯಾಂಕ್ ನಲ್ಲಿ ಕ್ಷೀರ ಸಮೃದ್ಧಿ ಯೋಜನೆಯಡಿ ಒಂದೂವರೆ ಲಕ್ಷದವರೆಗೂ ಸಾಲ ಸೌಲಭ್ಯ ಯೋಜನೆ ಜಾರಿಯಲ್ಲಿದೆ. ಸದುಪಯೋಗಕ್ಕೆ ಮುಂದಾಗಬೇಕು ಎಂದರು. ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಚಲುವರಾಜು, ಮನ್ಮುಲ್ ನಿರ್ದೇಶಕ ಎಂ.ಕೆ.ಹರೀಶ್‌ಬಾಬು,ಮುಖಂಡರಾದ ಜಯರಾಮು,ಅರೆತಿಪ್ಪೂರುಎಂಪಿಸಿಎಸ್ ಅಧ್ಯಕ್ಷ ಮನುಕುಮಾರ್, ಕೃಷ್ಣ, ಮನ್ಮುಲ್ ಒಕ್ಕೂಟದ ಉಪವ್ಯವಸ್ಥಾಪಕ ಮಂಜೇಶ್, ಪಶುಸಂಗೋಪನೆ ಸಹಾಯಕ ನಿರ್ದೇಶಕ ಡಾ. ಗೋವಿಂದು, ವೈದ್ಯಾಧಿಕಾರಿಗಳಾದ ಕಾರ್ತಿಕ್, ಮಂಜೇಶ್, ಸಹಾಯಕ ವ್ಯವಸ್ಥಾಪಕ ನೂತನ್‌ಗೌಡ, ಹೊನ್ನೇಶ್, ಗೋವರ್ಧನ್, ಜಯಂತ್, ಚಂದನ್ ಇತರರಿದ್ದರು.

ಪಶ್ಚಿಮ ಬಂಗಾಳದಲ್ಲಿನ ಬಿಜೆಪಿ ಜಯಭೇರಿ ಹಿಂದೂ ಧರ್ಮದ ಗೆಲುವು: ಮುತಾಲಿಕ್

ಶ್ರೀರಂಗಪಟ್ಟಣ: ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಜಯಭೇರಿ ಬಾರಿಸಿ ಅಧಿಕಾರಕ್ಕೆ ಬಂದಿರುವುದು ಹಿಂದೂ ಧರ್ಮದ ಗೆಲುವಾಗಿದೆ ಎಂದು ಶ್ರೀರಾಮ ಸೇನೆ ರಾಜ್ಯಾಧ್ಯಕ್ಷ ಪ್ರಮೋದ್ ಮುತಾಲಿಕ್ ಹೇಳಿದರು. ಮೈಸೂರಿನಿಂದ ಕಾರ್ಯನಿಮಿತ ಬೆಂಗಳೂರಿಗೆ ತೆರಳುವ ಮಾರ್ಗ ಮಧ್ಯೆ ಶ್ರೀರಂಗಪಟ್ಟಣದ ಕುವೆಂಪು ವೃತ್ತದಲ್ಲಿ ಹಿಂದೂ ಜಾಗರಣ ವೇದಿಕೆಯ ಕಾರ್ಯಕರ್ತರಿಂದ ಅಭಿನಂದನೆ ಸ್ವೀಕರಿಸಿ ಮಾತನಾಡಿ, ಪಶ್ಚಿಮ ಬಂಗಾಳದ ಬಿಜೆಪಿ ಗೆಲುವು ಹಿಂದು ಧರ್ಮದ ಗೆಲುವು. ಮಹನೀಯರು, ಸಂತರು ಜನಿಸಿದ ನಾಡಿನಲ್ಲಿ ಇಂದು ಧರ್ಮ ಸ್ಥಾಪನೆಯಾಗಿದೆ ಎಂದು ಅಭಿಪ್ರಾಯಪಟ್ಟರು. ಮೂಡಲ ಬಾಗಿಲು ಹನುಮಾನ್ ಸಮಿತಿ ಪ್ರಮುಖ ಚಂದನ್ ಮಾತನಾಡಿ, ಕಾಳಿ ಮಾತೆ ನೆಲೆಸಿದ ನಾಡಿನಲ್ಲಿ ಹಿಂದೂ ಧರ್ಮಕ್ಕೆ ಜಯ ಸಿಕ್ಕಿದೆ ಎಂದರು ಗಿರೀಶ್, ಶಿವು, ಶರತ್ ಹರ್ಷ, ಸನತ್ ಶಂಕರ್,ಲಕ್ಷ್ಮೀನಾರಾಯಣ,ಶ್ರೀನಿವಾಸ್,ರಾಜು,ರವಿ ಹಲವು ಕಾರ್ಯಕರ್ತರಿದ್ದರು.

ವಲಸಿಗ ಮುಸ್ಲಿಮರನ್ನು ಭಾರತದಿಂದ ಹೊರ ಹಾಕಿ: ಪ್ರಮೋದ್ ಮುತಾಲಿಕ್



ಮದ್ದೂರು ಎಳನೀರು ಮಾರುಕಟ್ಟೆ ಬಳಿ ಅಭಿಮಾನಿಗಳ ಒತ್ತಾಯಕ್ಕೆ ಇಳಿದು ಹಿಂದೂ ಸಂಘಟನೆ ಮುಖ್ಯಸ್ಥ ಪ್ರಮೋದ್ ಮುತಾಲಿಕ್ ಅಭಿನಂದನೆ ಸ್ವೀಕರಿಸಿದರು.

ಮದ್ದೂರು: ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದಿರುವುದರಿಂದ ಆ ರಾಜ್ಯ ಸೇರಿ ಭಾರತದಲ್ಲಿರುವ ವಲಸಿಗ 5 ಕೋಟಿ ಮುಸ್ಲೀಮರನ್ನು ಕೇಂದ್ರ ಸರ್ಕಾರ ಕೂಡಲೇ ದೇಶದಿಂದ ಹೊರ ಹಾಕಬೇಕು ಎಂದು ಶ್ರೀರಾಮ ಸೇನಾ ಸಂಘಟನೆ ಮುಖ್ಯಸ್ಥ ಪ್ರಮೋದ್ ಮುತಾಲಿಕ್ ಆಗ್ರಹಿಸಿದರು.

ಪಟ್ಟಣದ ಎಳನೀರು ಮಾರುಕಟ್ಟೆಯಲ್ಲಿ ಬೆಂಗಳೂರಿನಿಂದ ಮೈಸೂರು ಕಡೆಗೆ ಹೋಗುವಾಗ ಅಭಿಮಾನಿಗಳ ಒತ್ತಾಯಕ್ಕೆ ಇಳಿದು ಅಭಿನಂದನೆ ಸ್ವೀಕರಿಸಿದ ನಂತರ ಎಳನೀರನ್ನು ಸ್ವೀಕರಿಸಿ ಮಾತನಾಡಿ, ದೇಶದಲ್ಲಿ ಪಾಕಿಸ್ತಾನಿಗಳು, ಬಾಂಗ್ಲಾದೇಶಿಕರು ಸೇರಿ 5 ಕೋಟಿಗೂ ಹೆಚ್ಚು ಮಂದಿ ಭಾರತಕ್ಕೆ ಬಂದು ಸೇರಿಕೊಂಡಿದ್ದಾರೆ. ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದಿರುವುದರಿಂದ ತಕ್ಷಣದಲ್ಲಿ ಕೇಂದ್ರ ಸರ್ಕಾರ ಇವರನ್ನೆಲ್ಲ ಭಾರತದಿಂದ ಹೊರಗೆ ಕಳಿಸುವ ಕೆಲಸವನ್ನು ಮೊದಲು ಮಾಡುತ್ತದೆ ಎಂದರು. ಭಾರತದಲ್ಲಿ ಹಿಂದುಗಳು ಸಂಘಟನೆಯಾಗಿ ಒಗ್ಗಟ್ಟಿನಿಂದ ಗಟ್ಟಿಯಾಗಬೇಕು. ನಾವು ಹಿಂದುತ್ವವನ್ನು ಉಳಿಸಿಕೊಳ್ಳಲು ಆಚಾರ- ವಿಚಾರದಲ್ಲಿ ಹಾಗೂ ಮನೆಯಲ್ಲಿ ಸನಾತನ ಧರ್ಮದ ಹಿಂದುತ್ವದ ಬಗ್ಗೆ ಮಾತನಾಡಬೇಕು. ಇದರ ಬಗ್ಗೆ ಯುವಕರು ಹೆಚ್ಚು ಜನರಲ್ಲಿ ಜಾಗೃತಿ ಮೂಡಿಸಬೇಕು, ಹಿಂದುತ್ವ ಉಳಿಸಿಕೊಳ್ಳಲು ಸದಾ ಹೋರಾಟ ಮಾಡಿದಾಗ ಮಾತ್ರ ಅದು ಸಾಧ್ಯವಾಗುತ್ತದೆ ಎಂದರು. ಗೋ ಹತ್ಯೆ ಹಾಗೂ ಗೋವುಗಳನ್ನು ಸಾಗಿಸುವ, ಖಸಾಯಿಖಾನೆಗಳಿಗೆ ಕಳಿಸುವುದನ್ನು ತಡೆಯುವುದು ಬಿಜೆಪಿ ಸರ್ಕಾರದಿಂದ ಮಾತ್ರ ಸಾಧ್ಯ. ಹಿಂದೂ ಸಂಘಟನೆಗಳು ಜಾಗೃತರಾಗಿ ಗೋಮಾತೆಯನ್ನು ಉಳಿಸಿಕೊಳ್ಳಲು ಮುಂದಾಗಬೇಕು ಎಂದರು. ಹಿಂದೂ ಸಂಘಟನೆ ಪ್ರಮುಖರಾದ ಕದಲೂರು ನವೀನ್, ಸುನಿಲ್, ವೀರಭದ್ರಸ್ವಾಮಿ, ಶಿವಣ್ಣ ಉಪಸ್ಥಿತರಿದ್ದರು.

ದಾರ್ಶನಿಕರ ಸ್ಮರಣೆ | ಬುದ್ಧ ಪೂರ್ಣಿಮೆ, ಡಾ.ಬಿ.ಆರ್.ಅಂಬೇಡ್ಕರ್ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ದರ್ಶನ್ ಬಿ.ಸೋಮಶೇಖರ್

ಭಗವಾನ್ ಬುದ್ಧನ ಸಂದೇಶಗಳು ಇಂದಿಗೂ ಪ್ರಸ್ತುತ

• **ಕನ್ನಡಪ್ರಭ ವಾರ್ತೆ** ಮಳವಳ್ಳಿ

ಪ್ರಪಂಚಕ್ಕೆ ಜ್ಞಾನದ ಬೆಳಕು ನೀಡುವ ಜೊತೆಗೆ ಮಾನವೀಯ ಮೌಲ್ಯವನ್ನು ತಿಳಿಸಿಕೊಟ್ಟ ಬುದ್ಧನ ಸಂದೇಶಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಭಾರತೀಯ ಬೌದ್ಧ ಮಹಾಸಭಾ ಯುವ ಘಟಕ ರಾಜ್ಯಾಧ್ಯಕ್ಷ ದರ್ಶನ್ ಬಿ. ಸೋಮಶೇಖರ್‌ತಿಳಿಸಿದರು.

ತಾಲೂಕಿನ ಬಾಚನಹಳ್ಳಿಯ ಬುದ್ಧನ ಪ್ರತಿಮೆ ಆವರಣದಲ್ಲಿ ಭಾರತೀಯ ಬೌದ್ಧ ಮಹಾಸಭಾ ಯುವ ಘಟಕ, ನವೋದಯ ಸೇವಾ ಟ್ರಸ್ಟ್ ಡಿ.ಹಲಸಹಳ್ಳಿ ಸಂಯುಕ್ತಾಶ್ರಯದಲ್ಲಿ ನಡೆದ 2570ನೇ ಬುದ್ಧ ಪೂರ್ಣಿಮೆ, ಡಾ.ಬಿ.ಆರ್.ಅಂಬೇಡ್ಕರ್‌ಜನ್ಮದಿನಾಚರಣೆ ಹಾಗೂ ಎಸ್ಸೆಸ್ಸೆಲ್ಸಿ, ಪಿಯುಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಗೌತಮ ಬುದ್ಧನ ಜನನ, ಜ್ಞಾನೋದಯ ಮತ್ತು ಮಹಾಪರಿನಿರ್ವಾಣ ಈ ಮೂರು ಘಟನೆಗಳು ವೈಶಾಖ ಮಾಸದ ಹುಣ್ಣಿಮೆ ದಿನದಂದು ನಡೆದಿರುವುದರಿಂದ ಅಪಾರ ಮಹತ್ವವನ್ನು ಪಡೆದಿದೆ. ಬುದ್ಧನು ಭಾರತ ದೇಶದಲ್ಲಿ ಹುಟ್ಟಿದ್ದರೂ ಕೂಡ ಅವರ ಸಂದೇಶಗಳನ್ನು ಅನುಸರಿಸಿದ ಹಲವು ದೇಶಗಳು ಬುದ್ಧನ ಮೌಲ್ಯ ಹಾಗೂ ಸಂದೇಶಗಳನ್ನು ಅಳವಡಿಸಿಕೊಂಡು ಅಭಿವೃದ್ಧಿಯಲ್ಲಿ ಮುಂಚೂಣಿಯಲ್ಲಿವೆ ಎಂದು ಹೇಳಿದರು.



ಬಾಚನಹಳ್ಳಿಯ ಬುದ್ಧನ ಪ್ರತಿಮೆ ಆವರಣದಲ್ಲಿ ನಡೆದ 2570ನೇ ಬುದ್ಧ ಪೂರ್ಣಿಮೆ, ಡಾ.ಬಿ.ಆರ್. ಅಂಬೇಡ್ಕರ್‌ಜನ್ಮದಿನಾಚರಣೆ ಕಾರ್ಯಕ್ರಮವನ್ನು ಗಣ್ಯರು ಮಾತನಾಡಿದರು.

ವಿದ್ಯಾರ್ಥಿಗಳು ಕೇವಲ ಅಂಕ ಗಳಿಸಿಕೊಳ್ಳುವುದಕ್ಕೆ ಮಾತ್ರ ಸೀಮಿತಗೊಳ್ಳದೇ ಮಾನವೀಯ ಮೌಲ್ಯಗಳು ಹಾಗೂ ಬುದ್ಧ ಅಂಬೇಡ್ಕರ್‌ಅವರ ಸಂದೇಶಗಳನ್ನು ತಿಳಿದುಕೊಳ್ಳುವ ಅವಶ್ಯಕತೆ ಇದೆ. ವಿದ್ಯಾರ್ಥಿಗಳಿಗೆ ಸಮಾಜ ಕಟ್ಟುವ ಜವಾಬ್ದಾರಿ ಹೆಚ್ಚಾಗಿರುವುದರಿಂದ ದೈಹಿಕ ಹಾಗೂ ಮಾನಸಿಕ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳಬೇಕಿದೆ ಎಂದು ಕಿವಿಮಾತು ಹೇಳಿದರು.

ಸಾಹಿತಿ ಕೃಷ್ಣಯ್ಯ ಮಾತನಾಡಿ, ಡಾ.ಬಿ.ಆರ್.ಅಂಬೇಡ್ಕರ್‌ಸಾವಿರಾರು ಪುಸ್ತಕಗಳನ್ನು ಓದಿ ಅಪಾರ ಜ್ಞಾನ ಸಂಪಾದಿಸಿ ಸಮಾಜಕ್ಕೆ ತಿಳಿಸಬೇಕಾದ ವಿಷಯವನ್ನು ಪುಸ್ತಕದಲ್ಲಿ ಬರೆದಿರುವುದರಿಂದ ಪ್ರತಿಯೊಬ್ಬರೂ ಅವರ ಪುಸ್ತಕಗಳನ್ನು ಓದಬೇಕೆಂದು ಸಲಹೆ ನೀಡಿದರು.

ಭಾರತೀಯ ಬೌದ್ಧ ಮಹಾಸಭಾ ಯುವ ಘಟಕರಾಜ್ಯಾದ್ಯಂತಬುದ್ಧನಸಂದೇಶಗಳನ್ನು ತಿಳಿಸುವ ಪ್ರಾಮಾಣಿಕ ಪ್ರಯತ್ನ ನಡೆಸಲಾಗುತ್ತಿದೆ. ಮೀಸಲು ಕ್ಷೇತ್ರ ಮಳವಳ್ಳಿಯಲ್ಲಿ ಬುದ್ಧನ ಪ್ರತಿಮೆ ಪ್ರತಿಷ್ಠಾಪಿಸಿ ಸಾಮಾಜಿಕ ಸೇವೆಯಲ್ಲಿ ತೊಡಗಿರುವ ದರ್ಶನ್ ಬಿ. ಸೋಮಶೇಖರ್‌ಸೇವೆ ಶ್ಲಾಘನೀಯ ಎಂದರು.

ಇದೇ ವೇಳೆ ಎಸ್ಸೆಸ್ಸೆಲ್ಸಿ, ಪಿಯುಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಬುದ್ಧನ ಪ್ರತಿಮೆಗೆ ಕಾರ್ಯಕ್ರಮಕ್ಕೂ ಮುನ್ನ ಗಣ್ಯರು ಹಾಗೂ ಸಾರ್ವಜನಿಕರು ಪುಷ್ಪ ನಮನ ಸಲ್ಲಿಸಿದರು.


ಮಾಜಿ ಸಚಿವ ಬಿ.ಸೋಮಶೇಖರ್, ಭಾರತೀಯ ಬೌದ್ಧ ಮಹಾಸಭಾ ಯುವ ಘಟಕ ಜಿಲ್ಲಾಧ್ಯಕ್ಷ ಮಾರ್ಕಾಲು ನಟರಾಜು, ನಿವೃತ್ತ ಉಪನ್ಯಾಸಕ ರಂಗಸ್ವಾಮಿ, ಅಂಬೇಡ್ಕರ್‌ವಾದಿ ಕಲ್ಕುಣಿ ಮಹದೇವು, ಮುಖಂಡರಾದ ಸೀಕ್ರೇಶ್, ಮಲ್ಲಿಕ್, ಮರಿಸ್ವಾಮಿ, ಸಂದೇಶ್ ಸೇರಿದಂತೆ ಇತರರು ಇದ್ದರು.

ಕಾಟಣ್ಣಸ್ವಾಮಿ ಅದ್ದೂರಿ ಜಾತ್ರಾ ಮಹೋತ್ಸವ

ಏಳು ಕೂಟದ ಬೀರೇದೇವರುಗಳ ಉತ್ಸವ, ವೈಭವದ ಕೊಂಡೋತ್ಸವ ಕಣ್ತುಂಬಿಕೊಂಡ 25 ಸಾವಿರಕ್ಕೂ ಹೆಚ್ಚು ಭಕ್ತರು



ಶ್ರೀ ಕಾಟಣ್ಣಸ್ವಾಮಿಯ ಜಾತ್ರಾ ಮಹೋತ್ಸವದ ಪ್ರಯುಕ್ತ ಮುಂಜಾನೆ ವೈಭವದ ಕೊಂಡೋತ್ಸವ ನಡೆಯಿತು.





ಬೀರೇಶ್ವರಪುರ ಗ್ರಾಮದ ಶ್ರೀ ಕಾಟಣ್ಣಸ್ವಾಮಿ ದೇವರು(ಎಡಚಿತ್ರ). ಕಾಟಣ್ಣಸ್ವಾಮಿಗೆ ತಂಬಿಟ್ಟಿನ ಆರತಿಯೊಂದಿಗೆ ಭಕ್ತರು ಪೂಜೆ ಸಲ್ಲಿಸಿದರು.

• **ಕನ್ನಡಪ್ರಭ ವಾರ್ತೆ** ನಾಗಮಂಗಲ

ತಾಲೂಕಿನ ಬೀರೇಶ್ವರಪುರ ಗ್ರಾಮದಲ್ಲಿ 44 ವರ್ಷಗಳ ನಂತರ ಜರುಗುತ್ತಿರುವ ಶ್ರೀ ಕಾಟಣ್ಣಸ್ವಾಮಿ ಜಾತ್ರಾ ಮಹೋತ್ಸವದ ಪ್ರಯುಕ್ತ ಸೋಮವಾರ ರಾತ್ರಿ ನಡೆದ ಏಳುಕೂಟದ ಬೀರೇದೇವರುಗಳ ಉತ್ಸವ ಹಾಗೂ ಮಂಗಳವಾರ ಮುಂಜಾನೆ ನಡೆದ ವೈಭವದ ಕೊಂಡೋತ್ಸವಕ್ಕೆ 25 ಸಾವಿರಕ್ಕೂ ಹೆಚ್ಚು ಭಕ್ತರು ಸಾಕ್ಷಿಯಾದರು.

ಸೋಮವಾರ ರಾತ್ರಿ ಗ್ರಾಮಕ್ಕೆ ಆಗಮಿಸಿದ ಏಳುಕೂಟದ ದೇವರುಗಳಿಗೆ ಗ್ರಾಮಸ್ಥರು ಧೂಪ ದೀಪದಾರತಿ ಮಾಡಿ ಮಂಗಳವಾದ್ಯ, ತಮಟೆ ಮೇಳದೊಂದಿಗೆ ಅದ್ದೂರಿ ಸ್ವಾಗತ ಕೋರಿ ಅತ್ಯಂತ ಶ್ರದ್ಧಾಭಕ್ತಿಯಿಂದ ಬರಮಾಡಿಕೊಂಡರು.

ನಂತರ ಗ್ರಾಮದ ಶ್ರೀ ದೊರೆ ದೊಡ್ಡಯ್ಯಸ್ವಾಮಿ, ಶ್ರೀ ಕಾಟಣ್ಣಸ್ವಾಮಿ ಸೇರಿ ತುಪ್ಪದಮಡು ಗ್ರಾಮದ ದಳವಾಯಿ ದೊಡ್ಡಯ್ಯಸ್ವಾಮಿ, ಮುಂಗೊಂಡ ಮುಂದಲಾರತಿ ಚಿಕ್ಕಯ್ಯಸ್ವಾಮಿ, ದೊಡ್ಡಾಬಾಲ ಗ್ರಾಮದ ಮಂತ್ರಿ ಹುಚ್ಚಪ್ಪಸ್ವಾಮಿ, ಹೊಂಗನೂರಮ್ಮದೇವಿ, ಆರಕೆರೆ ಗ್ರಾಮದ ಗಾಳಿಗುಂಡ ಹುಚ್ಚಪ್ಪಸ್ವಾಮಿ ಹಾಗೂ ಜೋಡಿನೇರಲಕೆರೆ ಗ್ರಾಮದ ದೊಡ್ಡದೇವಮ್ಮ ಮತ್ತು ಚಿಕ್ಕದೇವಮ್ಮ ದೇವರುಗಳಿಗೆ ಹೂ-ಹೊಂಬಾಳೆ, ಗಂಗಾಸ್ನಾನದ ನಂತರ ವಿಶೇಷ ಪೂಜಾ ಕೈಂಕರ್ಯ ಹಾಗೂ ಉತ್ಸವಗಳು ಜರುಗಿದವು.

ಜಾತ್ರಾ ಮಹೋತ್ಸವಕ್ಕೆ ನಾಡಿನ ವಿವಿಧ ಭಾಗಗಳಿಂದ ಆಗಮಿಸಿದ್ದ ಸಹಸ್ರಾರು ಸಂಖ್ಯೆಯ ಭಕ್ತರಿಗೆ ಬೀರೇಶ್ವರಪುರ, ಬಳಪದ ಮಂಟಿಕೊಪ್ಪಲು, ಗದ್ದೆಭೂವನಹಳ್ಳಿ, ಮರಿಲಿಂಗನದೊಡ್ಡಿ ಸೇರಿದಂತೆ ವಿವಿಧ ಗ್ರಾಮಗಳ ದೇವರ ಒಕ್ಕಲುಗಳ ಬೀಡಿಕೆಯಿಂದಸೋಮವಾರರಾತ್ರಿ ಅನ್ನಸಂತರ್ಪಣೆ ನಡೆಯಿತು.

ಮಂಗಳವಾರ ಮುಂಜಾನೆ ನಂದಿ ಧ್ವಜ ಕುಣಿತ, ಹಲಗೆ ಕುಣಿತ, ವೀರಮಕ್ಕಳ ಕುಣಿತ ಸೇರಿದಂತೆ ವಿವಿಧ ಜಾನಪದ ಕಲಾ ತಂಡಗಳೊಂದಿಗೆ ಏಳುಕೂಟದ ದೇವರುಗಳ ಉತ್ಸವ ಮೆರವಣಿಗೆ ನಂತರ ಶ್ರೀ ಕಾಟಣ್ಣಸ್ವಾಮಿ ದೇವಸ್ಥಾನದ ಮುಂಭಾಗದಲ್ಲಿ ವೈಭವದ ಕೊಂಡೋತ್ಸವ ನಡೆಯಿತು. ಕೊಂಡೋತ್ಸವದ ವೇಳೆ ಭಾರೀ ಪ್ರಮಾಣದ ಬಣ್ಣ ಬಣ್ಣದ ಪಟಾಕಿಗಳು ಬಾನಂಗಳದಲ್ಲಿ ಚಿತ್ತಾರ ಮೂಡಿಸಿದವು.

ಬಳಿಕ ಭಕ್ತರು ಸರತಿ ಸಾಲಿನಲ್ಲಿ ನಿಂತು ತಂಬಿಟ್ಟಿನ ಆರತಿಯೊಂದಿಗೆ ಶ್ರೀ ಕಾಟಣ್ಣಸ್ವಾಮಿ ಹಾಗೂ ಏಳು ಕೂಟದ ಬೀರೇದೇವರುಗಳಿಗೆ ಪೂಜೆ ಸಲ್ಲಿಸಿ ತಮ್ಮ ಭಕ್ತಿ ಭಾವ ಸಮರ್ಪಿಸಿದರು. ತಾಲೂಕು ಸೇರಿ ಜಿಲ್ಲೆಯ ವಿವಿಧ ಭಾಗಗಳಿಂದ ಎತ್ತಿನ ಗಾಡಿ, ಟ್ರ್ಯಾಕ್ಟರ್‌ಗಳಲ್ಲಿ ಅಡುಗೆ ಸಾಮಗ್ರಿಗಳೊಂದಿಗೆ ಗ್ರಾಮಕ್ಕಾಗಮಿಸಿದ್ದ ಬೀರೇದೇವರ ಒಕ್ಕಲುಗಳು ನಿಗದಿಪಡಿಸಿದ ಸ್ಥಳಗಳಲ್ಲಿ ಬೀಡಿಕೆ ಹೂಡಿ ಸಹಸ್ರಾರು ಭಕ್ತಾದಿಗಳಿಗೆ ಅವರೆಕಾಳು ಕೂಟು, ಮುದ್ದೆ, ಪಾಯಸ, ಬೂಂದಿ ಅನ್ನಸಂತರ್ಪಣೆ ಮಾಡಿದರು.

ಏಳುಕೂಟದ ದೇವರ ಉತ್ಸವ ಮತ್ತು ವೈಭವದ ಕೊಂಡೋತ್ಸವವನ್ನು ಭಕ್ತರು ಕಣ್ತುಂಬಿಕೊಳ್ಳುವ ಸಲುವಾಗಿ ಜಾತ್ರೆ ನಡೆಯುವ ಹತ್ತಾರು ಸ್ಥಳಗಳಲ್ಲಿ ದೊಡ್ಡದಾದ ಎಲ್ ಇಡಿ ಪರದೆಗಳನ್ನು ಅಳವಡಿಸಲಾಗಿತ್ತು. ಭಕ್ತರ ಅನುಕೂಲಕ್ಕಾಗಿ ಕುಡಿಯುವ ನೀರು ಮತ್ತು ಹತ್ತಾರು ತಾತ್ಕಾಲಿಕ ಶೌಚಾಲಯಗಳ ವ್ಯವಸ್ಥೆ ಮಾಡಲಾಗಿತ್ತು.

ಮಂಗಳವಾರ ಸಂಜೆ ವೀರಮಕ್ಕಳಿಂದ ಹಲ್ಲುಮರಿ ಸಿಗಿಯುವ ಕಾರ್ಯಕ್ರಮ ಜರುಗಿತು. ಬಳಿಕ ಎಲ್ಲಾ ದೇವರುಗಳಿಗೆ ಗಂಗಾಸ್ನಾನ, ವಿಶೇಷ ಪೂಜೆ ಹಾಗೂ ಮಹಾಮಂಗಳಾರತಿ ನಡೆಯಿತು. ಬೀಡಿಕೆಯವರು ಹಾಗೂ ಭಕ್ತಾದಿಗಳಿಂದ ಆರತಿ ಸೇವೆ ನಡೆಯಿತು.

ನಾಲ್ಕು ದಿನಗಳ ಜಾತ್ರಾ ಮಹೋತ್ಸವದ ಹಿನ್ನೆಲೆ ಬೀರೇಶ್ವರಪುರ ಗ್ರಾಮದ ಮುಖ್ಯ ರಸ್ತೆ ಸೇರಿದಂತೆ ಎಲ್ಲಾ ದೇವಸ್ಥಾನಗಳು ಹಾಗೂ ಜಾತ್ರೆ ನಡೆಯುವ ಪ್ರದೇಶದಲ್ಲಿ ಅಲಂಕರಿಸಿದ್ದ ವರ್ಣರಂಜಿತ ವಿದ್ಯುತ್ ದೀಪಾಲಂಕಾರ ಜಾತ್ರೆಗೆ ವಿಶೇಷ ಮೆರಗು ನೀಡಿತು. ಸಹಸ್ರಾರು ಸಂಖ್ಯೆಯ ಭಕ್ತರ ಸುರಕ್ಷತೆ ದೃಷ್ಟಿಯಿಂದ ಡಿವೈಎಸ್‌ಪಿ ಬಿ.ಚಲುವರಾಜು, ನಾಗಮಂಗಲ ಪಟ್ಟಣ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಶಿವಕುಮಾರ್ ನೇತೃತ್ವದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ನಿಯೋಜಿಸಲಾಗಿತ್ತು.

ಸುದ್ದಿ ಸಿಂಚನ

ಉತ್ಸವಗಳು ಸಾಂಸ್ಕೃತಿಕ ಮಹತ್ವ ಸಾರುತ್ತವೆ: ಸಚಿವ ಚಲುವರಾಯಸ್ವಾಮಿ

ನಾಗಮಂಗಲ: ಹಬ್ಬ ಮತ್ತು ಜಾತ್ರೆಗಳಲ್ಲಿ ನಡೆಯುವ ವಿವಿಧ ಪೂಜಾ ಸಂಪ್ರದಾಯಗಳು ನಮ್ಮ ಪೂರ್ವಿಕರ ಪರಂಪರೆ, ಸಂಸ್ಕೃತಿ, ಆಚರಣೆಗಳನ್ನು ಮೇಳೈಸಿ ಸಾಂಸ್ಕೃತಿಕ ಮಹತ್ವ ಸಾರುತ್ತವೆ ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಅಭಿಪ್ರಾಯಪಟ್ಟರು. ತಾಲೂಕಿನ ಬೀರೇಶ್ವರಪುರ ಗ್ರಾಮಕ್ಕೆ ಮಂಗಳವಾರ ಬೆಳಗ್ಗೆ ಆಗಮಿಸಿ ಶ್ರೀ ಕಾಟಣ್ಣಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿ ಏಳುಕೂಟದ ದೇವರುಗಳ ದರ್ಶನಾಶೀರ್ವಾದ ಪಡೆದುಕೊಂಡ ಬಳಿಕ ಮಾತನಾಡಿ, 44 ವರ್ಷಗಳ ಬಳಿಕ ಜಾತ್ರೆ ನಡೆಯುತ್ತಿದೆ ಎಂದರೆ ನಮ್ಮ ಪೂರ್ವಿಕರು ಜಾತ್ರೆಗಳ ಮಹತ್ವವನ್ನು ಎಷ್ಟು ಅರಿತಿದ್ದರು ಎಂಬುದನ್ನು ಅಂದಾಜಿಸಬಹುದಾಗಿದೆ ಎಂದರು. ಜಾತ್ರೆ, ರಥೋತ್ಸವಗಳು, ಮೇಳಗಳು ಕೇವಲ ಭಕ್ತರ ಜಮಾವಣೆಯಷ್ಟೇ ಆಗಿರದೆ ಸಂಸ್ಕೃತಿ, ಪರಂಪರೆಯನ್ನು ಒಂದು ಪೀಳಿಗೆಯಿಂದ ಮತ್ತೊಂದು ಪೀಳಿಗೆಗೆ ಪರಿಚಯಿಸುವ ಸಾಂಸ್ಕೃತಿಕ ಕೊಂಡಿಗಳಾಗಿ ಕರ್ತವ್ಯ ನಿರ್ವಹಿಸುತ್ತಿವೆ ಎಂದು ತಿಳಿಸಿದರು. ಜಾತ್ರೆ ನಡೆಯುವ ಊರಿನಲ್ಲಿ ನೆಂಟರಿಷ್ಟರ ಸಮಾಗಮವಾಗುತ್ತದೆ, ಪ್ರತಿ ಮನೆಯಲ್ಲೂ ಹಬ್ಬದ ಸಂಭ್ರಮ ಮೇಳೈಸುತ್ತದೆ. ಹೀಗೆ ಜಾತ್ರೆ ಎಂಬುದು ವಿಶಿಷ್ಟ ಭಾವಗಳ ಅನಾವರಣ ಎಂದು ತಿಳಿಸಿದರು. ಜಾತ್ರಾ ಮಹೋತ್ಸವಕ್ಕೆ ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಭಕ್ತಸಾಗರವೇ ಹರಿದುಬಂದಿದ್ದರೂ ಸಹ ಭಕ್ತರಿಗೆ ಯಾವುದೇ ಸಮಸ್ಯೆಯಾಗದಂತೆ ಗ್ರಾಮಸ್ಥರು ಒಗ್ಗಟ್ಟಿನಿಂದ ಹಗಲಿರುಳು ಶ್ರಮಿಸಿರುವುದಕ್ಕೆ ಅಭಿನಂದಿಸುತ್ತೇನೆ ಎಂದು ತಿಳಿಸಿದರು. ಎಂಡಿಸಿಸಿ ಬ್ಯಾಂಕ್ ಅಧ್ಯಕ್ಷ ಸಚ್ಚಿನ್ ಚಲುವರಾಯಸ್ವಾಮಿ, ತಹಸೀಲ್ದಾರ್ ಜಿ.ಆದರ್ಶ, ತಾಪಂ ಇಒ ಸತೀಶ್, ಮುಖಂಡರಾದ ಸುನಿಲ್ ಲಕ್ಷ್ಮೀಕಾಂತ್, ಗ್ರಾಮದ ಪ್ರಧಾನ ಅರ್ಚಕ ಶಿವರಾಜು, ಮುಖ್ಯಸ್ಥರಾದ ಶಿವಣ್ಣ, ಮಹೇಶ, ಮಂಜುನಾಥ್, ಪುಟ್ಟಪ್ಪ, ಸುರೇಶ, ರಮೇಶ್ ಸೇರಿದಂತೆ ಹಲವರು ಇದ್ದರು.

ಕಳೆದೊಂದು ವರ್ಷದಲ್ಲಿ 55 ಮಂದಿ ಅಪ್ರಾಪ್ತ ಗರ್ಭಿಣಿಯರ ಸ್ಕ್ಯಾನಿಂಗ್

ಉಪ ಲೋಕಾಯುಕ್ತರ ಚಾಟಿಯಿಂದ ಎಚ್ಚೆತ್ತ ಜಾಗೃತ ದಳ ಮಂಡ್ಯ ಡಯಾಗ್ನೋಸ್ಟಿಕ್ ಸೆಂಟರ್‌ಗೆ ತೆರಳಿ ಪರಿಶೀಲನೆ

• **ಕನ್ನಡಪ್ರಭ ವಾರ್ತೆ** ಮಂಡ್ಯ

ನಗರದ ಮಂಡ್ಯ ಡಯಾಗ್ನೋಸ್ಟಿಕ್ ಸೆಂಟರ್‌ನಲ್ಲಿ ಕಳೆದೊಂದು ವರ್ಷದಲ್ಲಿ 55 ಬಾಲ ಗರ್ಭಿಣಿಯರ ಸ್ಕ್ಯಾನಿಂಗ್ ಮಾಡಿರುವುದಾಗಿ ಜಾಗೃತ ದಳದ ಅಧಿಕಾರಿಗಳು ನಡೆಸಿದ ಪರಿಶೀಲನೆ ವೇಳೆ ಕಂಡುಬಂದಿದೆ.

ಉಪ ಲೋಕಾಯುಕ್ತರು ಬೀಸಿದ ಚಾಟಿಯಿಂದ ಕುಂಭಕರ್ಣ ನಿದ್ರೆಯಲ್ಲಿದ್ದ ತಾಲೂಕು ಮಟ್ಟದ ಜಾಗೃತದಳಗಳು ಇದೀಗ ಎಚ್ಚೆತ್ತು ಜಿಲ್ಲೆಯ ಎಲ್ಲಾ ಖಾಸಗಿ ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ತೆರಳಿ ಪರಿಶೀಲನೆ ನಡೆಸಲಾರಂಭಿಸಿವೆ. ಅದರಂತೆ ಮಂಗಳವಾರ ತಾಲೂಕು ಜಾಗೃತ ದಳ ಮಂಡ್ಯ ತಹಸೀಲ್ದಾರ್ ವಿಶ್ವನಾಥ್ ನೇತೃತ್ವದಲ್ಲಿ ತಾಲೂಕು ಆರೋಗ್ಯಾಧಿಕಾರಿಗಳ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿತು.

ಮಂಡ್ಯ ಡಯಾಗ್ನೋಸ್ಟಿಕ್ ಸೆಂಟರ್‌ಗೆ ತೆರಳಿ ಪರಿಶೀಲನೆ ನಡೆಸಿದ ವೇಳೆ ಕಳೆದೊಂದು ವರ್ಷದಲ್ಲಿ 16 ಸಾವಿರ ಗರ್ಭಿಣಿಯರ ಸ್ಕ್ಯಾನಿಂಗ್ ಆಗಿದ್ದು, ಅದರಲ್ಲಿ 55 ಬಾಲ ಗರ್ಭಿಣಿಯರಿರುವುದು ಕಂಡುಬಂದಿದೆ. ಈ ಬಾಲಗರ್ಭಿಣಿಯರ ಮಾಹಿತಿಯನ್ನು ಸಂಬಂಧಿಸಿದವರಿಗೆ ನೀಡಿದ್ದಾರೆಯೇ ಎಂಬ ಬಗ್ಗೆ ಪರಿಶೀಲಿಸಲಾಗುತ್ತಿದೆ. ಒಮ್ಮೆ ಮದುವೆಯಾಗಿ ಸ್ಕ್ಯಾನಿಂಗ್‌ಗೆ ಬಂದಿದ್ದರೂ ಅದೂ ಪೋಕ್ಸೋ ಅಡಿ ಬರುವುದರಿಂದ ಅದರ ಬಗ್ಗೆಯೂ ಮಾಹಿತಿ ನೀಡಿರುವರೇ ಎಂದು ದಾಖಲೆಗಳನ್ನು ಪರಾಮರ್ಶಿಸಲಾಗುತ್ತಿದೆ ಎಂದು ನೋಡಲ್ ಅಧಿಕಾರಿ ಡಾ.ಕೆ. ಸೋಮಶೇಖರ್ ತಿಳಿಸಿದರು.



ಮಂಡ್ಯ ಡಯಾಗ್ನೋಸ್ಟಿಕ್ ಸೆಂಟರ್‌ನಲ್ಲಿ ತಹಸೀಲ್ದಾರ್ ನೇತೃತ್ವದ ಜಾಗೃತದಳ ಸ್ಕ್ಯಾನಿಂಗ್ ಸೆಂಟರ್‌ನ ರಿಜಿಸ್ಟರ್ ಹಾಗೂ ಸ್ಕ್ಯಾನಿಂಗ್ ಮಾಡಿರುವ ದಾಖಲೆಗಳ ಕುರಿತಂತೆ ಪರಿಶೀಲನೆ ನಡೆಸಿದರು.

ಸ್ಕ್ಯಾನಿಂಗ್ ಸೆಂಟರ್‌ನ ರಿಜಿಸ್ಟರ್ ಹಾಗೂ ಸ್ಕ್ಯಾನಿಂಗ್ ಮಾಡಿರುವ ದಾಖಲೆಗಳ ಕುರಿತಂತೆ ಪರಿಶೀಲನೆ ನಡೆಸಿದರು. ಸ್ಕ್ಯಾನಿಂಗ್ ದಾಖಲೆಗಳ ನಿರ್ವಹಣೆಯನ್ನು ಸರಿಯಾದ ಕ್ರಮದಲ್ಲಿಡುವಂತೆ ಡಯಾಗ್ನೋಸ್ಟಿಕ್ ಸೆಂಟರ್ ಸಿಬ್ಬಂದಿಗೆ ಸೂಚಿಸಿದರು. ಬಾಲ ಗರ್ಭಿಣಿಯರು ಸ್ಕ್ಯಾನಿಂಗ್‌ಗೆ ಬಂದಿರುವುದು ಕಂಡುಬಂದ ಕೂಡಲೇ ಸಂಬಂಧಿಸಿದವರಿಗೆ ಮಾಹಿತಿ ನೀಡಬೇಕು. ಲಿಂಗಪತ್ತೆ ಪ್ರಕರಣ ನಡೆಸುವುದು, ಭ್ರೂಣ ಹತ್ಯೆಯಂತಹ ಕೃತ್ಯಗಳಿಗೆ ಮುಂದಾಗದಂತೆ ಎಚ್ಚರಿಕೆ ನೀಡಿದರು. ಇದೇ ವೇಳೆ ತಾಲೂಕು ಆರೋಗ್ಯ ಅಧಿಕಾರಿ ಜವರೇಗೌಡ, ಸಿಡಿಪಿಒ ನಾರಾಯಣ್, ಅಧಿಕಾರಿಗಳು ಪಾಲ್ಗೊಂಡಿದ್ದರು.

ಹುಟ್ಟೂರಿನಲ್ಲಿ ಶಾಲೆ ಕಟ್ಟಿಸಿ ವಿದ್ಯಾರ್ಥಿಗಳಿಗೆ ನೆರವು

ಕಣ್ವ ಫೌಂಡೇಷನ್‌ನ ಎಚ್.ಎಂ.ವೆಂಕಟಪ್ಪನವರಿಗೆ ತಾಯಮ್ಮ ಹನಕೆರೆ ಕೆ.ಬೋರಯ್ಯ ಸಮಾಜಮುಖಿ ಪ್ರಶಸ್ತಿ ಪುರಸ್ಕಾರ

• **ಕನ್ನಡಪ್ರಭ ವಾರ್ತೆ** ಮಂಡ್ಯ

ಸೌಲಭ್ಯದ ಕೊರತೆಗಳಿಂದ ಸರ್ಕಾರಿ ಶಾಲೆಗಳು ಹಾಗೂ ಆಸ್ಪತ್ರೆಗಳು ನೇಪಥ್ಯಕ್ಕೆ ಸರಿಯುತ್ತಿರುವ ನಡುವೆಯೂ ನನ್ನ ಹುಟ್ಟೂರಿನಲ್ಲಿ ಶಾಲೆ ಕಟ್ಟಿಸಿ ಶಿಕ್ಷಣದ ಎಲ್ಲಾ ಸೌಲಭ್ಯ ಸಿಗುವಂತೆ ಮಾಡಿದ್ದರಿಂದ ಇಂದು ಸುತ್ತಮುತ್ತಲ ಗ್ರಾಮಗಳ ವಿದ್ಯಾರ್ಥಿಗಳಿಗೆ ಸಾಕಷ್ಟು ನೆರವಾಗಿದೆ ಎಂದು ಕಣ್ವ ಫೌಂಡೇಷನ್ ಸಂಸ್ಥಾಪಕ ಎಚ್.ಎಂ.ವೆಂಕಟಪ್ಪ ಹೇಳಿದರು.

ನಗರದ ನಾಲ್ವಡಿ ಕೃಷ್ಣರಾಜ ಒಡೆಯರ್ ಕಲಾಮಂದಿರದಲ್ಲಿ ಕರ್ನಾಟಕ ಸಂಘ, ಎಂ.ಎಲ್.ಶ್ರೀಕಂಠೇಗೌಡ ಸಂಶೋಧನಾ ಕೇಂದ್ರದ ಸಹಯೋಗದಲ್ಲಿ ಆಯೋಜಿಸಿದ್ದ ತಾಯಮ್ಮ ಹನಕೆರೆ ಕೆ.ಬೋರಯ್ಯ ಸಮಾಜಮುಖಿ ಪುರಸ್ಕಾರ ಪ್ರಥಮ ವರ್ಷದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದರು.

ಬೆಂಗಳೂರಿನಲ್ಲಿ ಸಿಗುವ ಶಿಕ್ಷಣ ನನ್ನೂರಿನ ಶಾಲೆಯಲ್ಲಿಯೂ ಸಿಗಬೇಕೆಂದು 'ನೋ ಪ್ರಾಫಿಟ್, ನೋ ಲಾಸ್' ನಡಿಯಲ್ಲಿ ಶಾಲೆ ಆರಂಭಿಸಲು ಮುಂದಾದೆವು. ಅದರಂತೆ ಶಾಲೆಗೆ ಎಲ್ಲಾ ಸೌಲಭ್ಯವನ್ನೂ ನೀಡಿರುವ ಸಮಾಧಾನವಿದೆ. ಆಸ್ಪತ್ರೆಗಳಲ್ಲಿ ವೈದ್ಯರು ಸಕಾರಣ ನೀಡದೆ ರೋಗಿಗಳಿಗೆ ಉತ್ತಮ ಸೇವೆ ನೀಡುವುದು ಮುಖ್ಯ ಎಂದು ತಿಳಿಸಿದರು.

ನಿರ್ಮಲಾನಂದನಾಥ ಶ್ರೀಗಳು ಮಠವನ್ನು ಉತ್ತಮವಾಗಿ ನಡೆಸಿಕೊಂಡು ಹೋಗುತ್ತಿದ್ದಾರೆ, ಗ್ರಾಮೀಣ ಮಕ್ಕಳನ್ನು ಗುರುತಿಸಿ ಅವರಿಗೆ 4ನೇತರಗತಿಯಿಂದ ಪಿಯುಸಿವರೆಗೆ ವಸತಿ ಸೌಲಭ್ಯದೊಂದಿಗೆ ಉಚಿತ ಶಿಕ್ಷಣ ನೀಡಲು ಪ್ರತಿ ಜಿಲ್ಲಾ ಕೇಂದ್ರದಲ್ಲಿ ಮನಸ್ಸು ಮಾಡಿದ್ದಾರೆ. ಮೊದಲಿಗೆ ಚಿಕ್ಕಬಳ್ಳಾಪುರದಲ್ಲಿ ಶಾಲೆ ಆರಂಭಿಸುತ್ತಿದ್ದಾರೆ. ನಂತರದ ದಿನಗಳಲ್ಲಿ ಎಲ್ಲಾ ತಾಲೂಕು ಕೇಂದ್ರಗಳಲ್ಲಿ ತೆರೆಯಲು ಮುಂದಾಗಿರುವುದು ಶ್ಲಾಘನೀಯ ಎಂದರು.

ನಾನು ಮೊಟ್ಟಮೊದಲ ಬಾರಿಗೆ ವೈದ್ಯ ವೃತ್ತಿ ಶುರು ಮಾಡಿದ್ದು ಮಂಡ್ಯ ಜಿಲ್ಲೆಯ ಮದ್ದೂರು ತಾಲೂಕು ಕೆಸ್ತೂರಿನಲ್ಲಿ. ನಂತರ ಬೆಂಗಳೂರಿನ ಬೌರಿಂಗ್ ಆಸ್ಪತ್ರೆಯಲ್ಲಿ ಎಂಡಿ ಮುಗಿಸಿಕೊಂಡು ನಂತರ ಮಂಡ್ಯ ಜಿಲ್ಲಾಸ್ಪತ್ರೆಯಲ್ಲಿ 11 ವರ್ಷಗಳು ವೈದ್ಯ ವೃತ್ತಿ ನಡೆಸಿದೆ, ವೃತ್ತಿ ವೇಳೆ ನನಗೆ ಜನಪ್ರಿಯತೆಯನ್ನೂ ತಂದುಕೊಟ್ಟದ್ದು ಮಂಡ್ಯದಲ್ಲಿಯೇ. ನನಗೆ ವರ್ಗಾವಣೆ ಆಗಬಾರದೆಂದು ಜನಪ್ರತಿನಿಧಿಗಳು ಪ್ರೀತಿಯಿಂದ ಉಳಿಸಿಕೊಂಡಿದ್ದನ್ನು ಮರೆಯುವಂತಿಲ್ಲ ಎಂದು ಸ್ಮರಿಸಿದರು.

ವಿಧಾನ ಪರಿಷತ್ ಮಾಜಿ ಸದಸ್ಯ ಕೆ.ಟಿ.ಶ್ರೀಕಂಠೇಗೌಡ ಮಾತನಾಡಿ, ವೈದ್ಯಕೀಯ ಕ್ಷೇತ್ರವು ವ್ಯಾಪಾರೀಕರಣ ಆಗಿರುವ ಹೊತ್ತಿನಲ್ಲಿ ವೈದ್ಯ ವೆಂಕಟಪ್ಪ ಅವರು ರೋಗಿಗಳಿಗೆ ಉತ್ತಮ ಸೇವೆ ನೀಡುವ ಮೂಲಕ ಜನಮಾನಸದಲ್ಲಿ ನೆಲೆಸಿದ್ದಾರೆ. ತಾವು ಓದಿದ ಶಾಲೆಗೆ ₹15 ಕೋಟಿ ಹಣ ಖರ್ಚು ಮಾಡಿ ಪ್ರಾಥಮಿಕ, ಮಾಧ್ಯಮಿಕ ಹಾಗೂ ಪ್ರೌಢಶಾಲೆ ನಿರ್ಮಿಸಿ ರಾಜ್ಯದಲ್ಲಿ ಸುಸಜ್ಜಿತ ಶಾಲೆ ಕಟ್ಟಿಸಿದ್ದಾರೆ ಎಂದು ಶ್ಲಾಘಿಸಿದರು.

ಕರ್ನಾಟಕಸಂಘದಅಧ್ಯಕ್ಷಪ್ರೊ.ಜಯಪ್ರಕಾಶಗೌಡ ಮಾತನಾಡಿ, ಗ್ರಾಮಕ್ಕೆ ಒಳಿತು ಮಾಡುವ ಜನರ ಸಂಖ್ಯೆ ಕಡಿಮೆ ಇರುವ ಇಂದಿನ ದಿನಗಳಲ್ಲಿ ಹುಟ್ಟೂರಿಗೆ ವೆಂಕಟಪ್ಪ ಅವರು ಮಾಡಿರುವ ಸೇವೆ ಗುರುತಿಸಿ ಪ್ರಶಸ್ತಿ ನೀಡಲಾಗಿದೆ ಎಂದರು.

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಅನಾರೋಗ್ಯದಿಂದ ಗೈರಾಗಿದ್ದು, ಅವರ ಶುಭಸಂದೇಶ ತಿಳಿಸಿರುವ ಪತ್ರವನ್ನು ಓದಿ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರು ಪ್ರಶಸ್ತಿ ಪುರಸ್ಕೃತ ಎಚ್.ಎಂ. ವೆಂಕಟಪ್ಪರಿಗೆ ನೀಡಿದರು. ಕಾರ್ಯಕ್ರಮದಲ್ಲಿ ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷ ನಿರ್ಮಲಾನಂದನಾಥ ಸ್ವಾಮೀಜಿ, ಮಾಜಿ ಸಚಿವ ಸಿ.ಎಸ್.ಪುಟ್ಟರಾಜು, ಮಾಜಿ ಶಾಸಕ ಎಂ.ಶ್ರೀನಿವಾಸ್, ವಿಧಾನ ಪರಿಷತ್ ಮಾಜಿ ಸದಸ್ಯ ಬಿ.ರಾಮಕೃಷ್ಣ, ತಾಯಮ್ಮ ಹನಕೆರೆ ಕೆ.ಬೋರಯ್ಯರ ಪುತ್ರ ಎಚ್.ಬಿ.ನಾಗಪ್ಪ ಹನಕೆರೆ, ಮನ್ಮುಲ್ ನಿರ್ದೇಶಕ ಬಿ.ಆರ್. ರಾಮಚಂದ್ರ, ಸಂಘದ ಕಾರ್ಯದರ್ಶಿ ಚಂದಗಾಲು ಲೋಕೇಶ್, ಖಜಾಂಚಿ ಮಂಜುಳಾ ಉದಯಶಂಕರ್, ತಗ್ಗಹಳ್ಳಿ ವೆಂಕಟೇಶ್ ಭಾಗವಹಿಸಿದ್ದರು.



ಎಚ್.ಎಂ.ವೆಂಕಟಪ್ಪರಿಗೆ ತಾಯಮ್ಮ ಹನಕೆರೆ ಕೆ.ಬೋರಯ್ಯ ಸಮಾಜಮುಖಿ ಪುರಸ್ಕಾರ ನೀಡಿ ಅಭಿನಂದಿಸಲಾಯಿತು.

ಇಂದು ಮದ್ದೂರು ಉತ್ಸವ ಸಂಭ್ರಮ

ಸಂಗೀತ ರಸಸಂಜೆಗೆ ರವಿಚಂದ್ರನ್, ಚಂದನ್ ಶೆಟ್ಟಿ ಸೇರಿ ತಾರಾ ಮೆರುಗು



ಮದ್ದೂರು ಸರ್ಕಾರಿ ಕ್ರೀಡಾಂಗಣದಲ್ಲಿ ನಡೆಯಲಿರುವ ಮದ್ದೂರು ಉತ್ಸವದ ಪೂರ್ವಭಾವಿ ಸಿದ್ಧತೆಯನ್ನು ಶಾಸಕ ಕೆ.ಎಂ.ಉದಯ್, ಜಿಲ್ಲಾ ಎಸ್ಪಿ ಡಾ.ಶೋಭರಾಣಿ ಪರಿಶೀಲಿಸಿದರು.

• **ಕನ್ನಡಪ್ರಭ ವಾರ್ತೆ** ಮದ್ದೂರು

ಶ್ರೀ ಮದ್ದೂರಮ್ಮ ಹಾಗೂ ಶ್ರೀ ಉಗ್ರ ನರಸಿಂಹಸ್ವಾಮಿಯ ರಥೋತ್ಸವದ ಅಂಗವಾಗಿ ಕದಲೂರು ಉದಯ್ ಚಾರಿಟಬಲ್ ಟ್ರಸ್ಟ್ ವತಿಯಿಂದ ಮೇ 6ರಂದು ಆಯೋಜಿಸಿರುವ ಮದ್ದೂರು ಉತ್ಸವದ ಪೂರ್ವ ಸಿದ್ಧತೆಯನ್ನು ಶಾಸಕ ಕೆ.ಎಂ.ಉದಯ್ ಹಾಗೂ ಜಿಲ್ಲಾ ಎಸ್ಪಿ ಡಾ.ಶೋಭರಾಣಿ ಅಧಿಕಾರಿಗಳೊಂದಿಗೆ ಪರಿಶೀಲಿಸಿದರು.

ಪಟ್ಟಣದ ಸರ್ಕಾರಿ ಕ್ರೀಡಾಂಗಣದಲ್ಲಿ ಸಂಜೆ ಉತ್ಸವ ಹಾಗೂ ರಸಸಂಜೆ ಸಂಗೀತ ಕಾರ್ಯಕ್ರಮ ಪೂರ್ವ ಸಿದ್ಧತೆಗಳ ಬಗ್ಗೆ ಮಾಹಿತಿ ಪಡೆದ ಶಾಸಕರು, ಉತ್ಸವದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ, ಮಾಜಿ ಸಂಸದ ಡಿ.ಕೆ. ಸುರೇಶ್ ಸೇರಿದಂತೆ ಜಿಲ್ಲೆಯ ಶಾಸಕರು ಭಾಗವಹಿಸಲಿದ್ದಾರೆ ಎಂದರು.

ನಟರಾದ ವಿ.ರವಿಚಂದ್ರನ್, ಸಾಧುಕೋಕಿಲಾ, ಧ್ರುವಸರ್ಜಾ, ನವೀನ್ ಸಜ್ಜು, ಚಂದನ್‌ಶೆಟ್ಟಿ, ಪ್ರೇಮ್- ರಕ್ಷಿತಾ, ಚಿಕ್ಕಣ್ಣ ಸೇರಿದಂತೆ ಖ್ಯಾತ ನಿರೂಪಕಿ ಅನುಶ್ರೀ, ಹಾಸ್ಯ ಕಲಾವಿದರು, ನಿರ್ದೇಶಕರು, ಚಿತ್ರನಟರು ಪಾಲ್ಗೊಳ್ಳಲಿದ್ದಾರೆ. ಉತ್ಸವದ ವೇಳೆ ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಪೊಲೀಸರು ಅಗತ್ಯ ಕ್ರಮಗಳನ್ನು ಕೈಗೊಂಡಿರುವುದಾಗಿ ವಿವರಿಸಿದರು.

ಎಸ್ಪಿ ಡಾ.ಶೋಭರಾಣಿ ಮಾತನಾಡಿ, ಮದ್ದೂರು ಉತ್ಸವ ಶಾಂತಿಯುತವಾಗಿ ನಡೆಸಲು ಹೆಚ್ಚಿನ ಪೊಲೀಸರ ನಿಯೋಜನೆ ಮಾಡಲಾಗಿದೆ ಎಂದು ತಿಳಿಸಿದರು.

ಈ ವೇಳೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಚಲುವರಾಜು, ಪಿ.ರಾಜೀವ್, ಡಿಸಿಸಿ ಬ್ಯಾಂಕ್ ನಿರ್ದೇಶಕ ಪಿ.ಸಂದರ್ಶ, ಮನ್ಮುಲ್ ನಿರ್ದೇಶಕ ಎಂ.ಕೆ.ಹರೀಶ್‌ಬಾಬು, ನಗರಸಭೆ ಮಾಜಿ ಸದಸ್ಯ ಎಂ.ಬಿ.ಸಚಿನ್, ಸ್ಥಳೀಯ ಮುಖಂಡರಾದ ರವೀಶ್, ಶರತ್, ಜಯಪ್ರಕಾಶ್, ಎಂ.ಎಸ್. ಸಂತೋಷ್‌ಗೌಡ, ವೃತ್ತ ನಿರೀಕ್ಷಕರಾದ ನಾರಾಯಣಿ, ನವೀನ್, ಅನಿಲ್‌ಕುಮಾರ್, ಆರ್.ಸಿ.ಮಹೇಶ್, ಶಿವು, ತೈಲೂರು ರಘು ಇತರರಿದ್ದರು.



ಬದ್ಧತೆಯಿಂದ ಕೆಲಸ ಮಾಡುತ್ತಿರುವ ಕನ್ನಡ ಸಾಹಿತ್ಯ ಪರಿಷತ್: ಪದ್ಮನಾಭ ಅಭಿಪ್ರಾಯ

ಕೆ.ಆರ್.ಪೇಟೆಯ ಮಹಿಳಾ ಕಾಲೇಜಲ್ಲಿ ಕನ್ನಡ ಸಾಹಿತ್ಯ ಪರಿಷತ್‌ನ 113ನೇ ಸಂಸ್ಥಾಪನಾ ದಿನಾಚರಣೆ

• **ಕನ್ನಡಪ್ರಭ ವಾರ್ತೆ** ಕೆ.ಆರ್.ಪೇಟೆ

ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್‌ಅವರ ದೂರದೃಷ್ಟಿ ಫಲವಾಗಿ ಸ್ಥಾಪಿತವಾದ ಕನ್ನಡ ಸಾಹಿತ್ಯ ಪರಿಷತ್ ಕನ್ನಡಿಗರ ಹೆಮ್ಮೆಯ ಪ್ರಾತಿನಿಧಿಕ ಸಂಸ್ಥೆಯಾಗಿ ಬದ್ಧತೆಯಿಂದ ಕೆಲಸ ಮಾಡುತ್ತಿದೆ ಎಂದು ಉಪನ್ಯಾಸಕ ಆರ್.ಬಿ.ಪದ್ಮನಾಭ ಹೇಳಿದರು.

ಪಟ್ಟಣದಮಹಿಳಾಸರ್ಕಾರಿವಿದ್ಯಾಲಯದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಆಯೋಜಿಸಿದ್ದ ಸಂಸ್ಥಾಪನಾ ದಿನಾಚರಣೆಯಲ್ಲಿ ಮಾತನಾಡಿ, ಕಸಾಪ ಸಂಸ್ಥಾಪನೆಯಾಗಿ 112 ವರ್ಷಗಳು ಕಳೆದಿವೆ, ನಮ್ಮ ಸಂಸ್ಕೃತಿ ಹಾಗೂ ಪರಂಪರೆಯನ್ನು ಉಳಿಸಿ ಬೆಳೆಸುವ ಕಾರ್ಯವನ್ನು ನಿರಂತರವಾಗಿ ಮಾಡುತ್ತಿರುವ ಕಸಾಪಗೆ 113ನೇ ದಿನಾಚರಣೆ ಇದಾಗಿದೆ ಎಂದರು.

ಪರಿಷತ್ ಕನ್ನಡದ ಅಸ್ಮಿತೆಯನ್ನು ಎತ್ತಿ ಹಿಡಿಯುವ ಕೆಲಸವನ್ನು ಬದ್ಧತೆಯಿಂದ, ಪ್ರಾಮಾಣಿಕವಾಗಿ ಮಾಡಿ ಕನ್ನಡಿಗರಲ್ಲಿನ ಕನ್ನಡ ಪ್ರೇಮವನ್ನು ಜಾಗೃತಿ ಮೂಡಿಸುವ ಜೊತೆಗೆ, ಕನ್ನಡ ಸಾಹಿತ್ಯ ಲೋಕದಲ್ಲಿ ಕೆಲಸ ಮಾಡಿದ ಸಾಹಿತಿಗಳನ್ನು ಯುವಜನರು ಹಾಗೂ ವಿದ್ಯಾರ್ಥಿಗಳಿಗೆ ಪರಿಚಯಿಸುವ ಕೆಲಸವನ್ನು ಮಾಡುತ್ತಿದೆ ಎಂದು ಹೇಳಿದರು. ಕಸಾಪ ತಾಲೂಕು ಅಧ್ಯಕ್ಷ ಪೂರ್ಣಚಂದ್ರ ತೇಜಸ್ವಿ ಮಾತನಾಡಿ, ಸಾವಿರಾರು ವರ್ಷಗಳ ಭವ್ಯ ಇತಿಹಾಸವನ್ನು ಹೊಂದಿರುವ ಕನ್ನಡ ಭಾಷೆಯು ಕನ್ನಡಿಗರಲ್ಲಿನ ನಿರಭಿಮಾನದಿಂದ ಕಡಗಣನೆಗೆಒಳಗಾಗುತ್ತಿದ್ದರೂಕನ್ನಡಭಾಷೆಯು ವಿಶ್ವದಲ್ಲಿಯೇ ಅತಿ ಹೆಚ್ಚಿನ ಜನರು ಬಳಸುತ್ತಿರುವ ಜೀವಂತ ಭಾಷೆಯಾಗಿದೆ ಎಂದರು.


ಕೆ.ಆರ್.ಪೇಟೆ ಮಹಿಳಾ ಸರ್ಕಾರಿ ವಿದ್ಯಾಲಯದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ನಡೆದ ಸಂಸ್ಥಾಪನಾ ದಿನಾಚರಣೆಯನ್ನು ಗಣ್ಯರು ಉದ್ಘಾಟಿಸಿದರು.

ಕನ್ನಡ ಭಾಷೆಯನ್ನು ನಾಶಪಡಿಸಲು ಯಾರಿಂದಲೂ ಸಾಧ್ಯವಿಲ್ಲ, ಕನ್ನಡಿಗರಾದ ನಾವು ಕನ್ನಡದ ನೆಲದಲ್ಲಿ ವಾಸ ಮಾಡುತ್ತಿರುವ ಅನ್ಯ ಭಾಷಿಕರಿಗೆ ಕನ್ನಡ ಕಲಿಸಿ ಕೊಡುವ ಕೆಲಸ ಮಾಡಬೇಕು. ಕನ್ನಡ ಸಾರಸ್ವತ ಲೋಕದಲ್ಲಿ ಕೆಲಸ ಮಾಡಿದ ಸಾಹಿತಿಗಳು, ಕವಿಗಳು ಹಾಗೂ ವಿದ್ವಾಂಸರನ್ನು ವಿದ್ಯಾರ್ಥಿಗಳಿಗೆ ಪರಿಚಯಿಸುವ ಕೆಲಸವನ್ನು ಕಳೆದ40 ವರ್ಷಗಳಿಂದಶಾಲೆಗೊಂದು ಕಾರ್ಯಕ್ರಮದ ಮೂಲಕ ಮಾಡುತ್ತಿರುವ ನಮ್ಮ ತಾಲೂಕು ಘಟಕವು ರಾಜ್ಯದಲ್ಲಿಯೇ ಮಾದರಿ ಸಾಹಿತ್ಯ ಪರಿಷತ್ ಘಟಕವಾಗಿ ಕೆಲಸ ಮಾಡುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲರಾದ ಪ್ರೊ.ಅನುರಾಧ ಅಧ್ಯಕ್ಷತೆ ವಹಿಸಿದ್ದರು. ಕಸಾಪ ಮಾಜಿ ಅಧ್ಯಕ್ಷ ಕೆ.ಎಸ್.ಸೋಮಶೇಖರ್, ಮಹಿಳಾ ಘಟಕದ ಅಧ್ಯಕ್ಷೆ ಸವಿತಾ ರಮೇಶ್, ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಮಾಜಿ ಅಧ್ಯಕ್ಷ ಪದ್ಮೇಶ್, ಎಕ್ಯೂಎಸಿ ವಿಭಾಗದ ಸಂಚಾಲಕ ಮಧು, ಪ್ರಗತಿ ಶಿಕ್ಷಣ ಸಂಸ್ಥೆ ಸಂಸ್ಥಾಪಕ ಅಧ್ಯಕ್ಷ ಡಾ.ಕೆ.ಕಾಳೇಗೌಡ, ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥೆ ಡಾ. ಪ್ರತಿಮಾ, ಕಸಾಪ ಪ್ರಧಾನ ಕಾರ್ಯದರ್ಶಿ ಕಟ್ಟೆ ಮಹೇಶ್ ಸೇರಿ ನೂರಾರು ಕನ್ನಡ ಅಭಿಮಾನಿಗಳು ಭಾಗವಹಿಸಿದ್ದರು. ಇದೇ ವೇಳೆ ಪ್ರಗತಿಪರ ಕೃಷಿಕ, ಎಪಿಎಂಸಿ ಮಾಜಿ ಅಧ್ಯಕ್ಷ ಎಚ್.ವೈ. ಜಯಕುಮಾರ್‌ಹಾಗೂಕಾಲೇಜಿನಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು.

ಮನ್ಮುಲ್ ಉಪ ವ್ಯವಸ್ಥಾಪಕರ ನೂತನ ಕಚೇರಿ ನಿರ್ಮಾಣಕ್ಕೆ ಸಿ.ಶಿವಕುಮಾರ್ ಭೂಮಿ ಪೂಜೆ


ಪಾಂಡವಪುರ ಜೆ.ಪಿ ನಗರ ಬಡಾವಣೆಯಲ್ಲಿ ಮನ್ಮುಲ್ ಉಪವ್ಯವಸ್ಥಾಪಕರ ನೂತನ ಕಚೇರಿ ನಿರ್ಮಾಣಕ್ಕೆ ನಿರ್ದೇಶಕ ಸಿ.ಶಿವಕುಮಾರ್ ಭೂಮಿಪೂಜೆ ನೆರವೇರಿಸಿದರು.

• **ಕನ್ನಡಪ್ರಭ ವಾರ್ತೆ** ಪಾಂಡವಪುರ

ಪಟ್ಟಣದ ಜೆ.ಪಿ ನಗರ ಬಡಾವಣೆಯಲ್ಲಿ ಮನ್ಮುಲ್ ಉಪ ವ್ಯವಸ್ಥಾಪಕರ ನೂತನ ಕಚೇರಿಯನ್ನು ಅಂದಾಜು ₹4.40 ಕೋಟಿ ವೆಚ್ಚದಲ್ಲಿ ನಿರ್ಮಾಣ ಕಾಮಗಾರಿಗೆ ನಿರ್ದೇಶಕ ಸಿ.ಶಿವಕುಮಾರ್‌ಭೂಮಿಪೂಜೆ ನೆರವೇರಿಸಿದರು.

ಬಳಿಕ ಮಾತನಾಡಿದ ಅವರು, ಮನ್ಮುಲ್ ಉಪವ್ಯವಸ್ಥಾಪಕರ ಕಚೇರಿಗೆ ಸ್ವಂತ ಕಟ್ಟಡ ಇಲ್ಲದ ಪರಿಣಾಮ ಆರಂಭದಿಂದಲೂ ಬಾಡಿಗೆ ಕಟ್ಟಡದಲ್ಲಿ ಕಚೇರಿ ನಡೆಸಲಾಗುತ್ತಿತ್ತು. ಸ್ವಂತ ಕಚೇರಿ ನಿರ್ಮಾಣ ಮಾಡಲೆಂದು ಒಕ್ಕೂಟದಿಂದ ನಿವೇಶನ ಖರೀದಿಸಿ ₹4.40 ಕೋಟಿ ವೆಚ್ಚದ ಅನುದಾನದಲ್ಲಿ ಕಟ್ಟಡ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಲಾಗಿದೆ ಎಂದರು.

ಕಟ್ಟಡವು ಮೂರು ಅಂತಸ್ಥಿನಿಂದ ಕೂಡಿರಲಿದ್ದು, ನೆಲ ಅಂತಸ್ಥಿನಲ್ಲಿ ವಾಹನಗಳ ಪಾರ್ಕಿಂಗ್ ಹಾಗೂ ಗೋಡೌನ್ ನಿರ್ಮಾಣ ಮಾಡಲಾಗುವುದು, ಮೊದಲ ಅಂತಸ್ಥಿನಲ್ಲಿ ಕಚೇರಿ ನಿರ್ವಹಣೆ ಹಾಗೂ ಎರಡನೇ ಅಂತಸ್ಥಿನಲ್ಲಿ ಸಭಾಂಗಣ ಹಾಗೂ ನಿರ್ದೇಶಕರ ಕಚೇರಿ ನಿರ್ಮಾಣ ಮಾಡಲಾಗುವುದು, ಶೀಘ್ರವೇ ಕಟ್ಟಡ ನಿರ್ಮಾಣ ಮಾಡಿ ಉದ್ಘಾಟನೆಯನ್ನು ಮಾಡಲಾಗುವುದು ಎಂದರು.

ಎಂಡಿ ಡಾ.ಅಕ್ಕಪ್ಪರೆಡ್ಡಿ ಮಾತನಾಡಿ, ಪಟ್ಟಣದಲ್ಲಿ ಮನ್ಮುಲ್ ಉಪವ್ಯವಸ್ಥಾಪಕರ ಕಚೇರಿ ನಿರ್ಮಾಣಕ್ಕೆ ಸರ್ಕಾರಿ ನಿವೇಶನ ನೀಡುವಂತೆ ತಾಲೂಕು ಆಡಳಿತಕ್ಕೆ ಪತ್ರ ವ್ಯವಹಾರ ನಡೆಸಲಾಗಿತ್ತು. ಆದರೆ, ಪಟ್ಟಣದಲ್ಲಿ ಸರ್ಕಾರಿ ಸ್ಥಳ ಇಲ್ಲವೆಂದು ತಾಲೂಕು ಆಡಳಿತ ಪತ್ರ ಬರೆದ ಹಿನ್ನಲೆಯಲ್ಲಿ ಕಾನೂನಿನಡಿ ಸ್ವಂತ ನಿವೇಶನ ಖರೀದಿಸಿ ನಿರ್ಮಾಣ ಮಾಡಲಾಗುತ್ತಿದೆ ಎಂದರು. ಮನ್ಮುಲ್ ವ್ಯವಸ್ಥಾಪಕ ಶಿವಕುಮಾರ್, ಉಪವ್ಯವಸ್ಥಾಪಕ ಆರ್.ಪ್ರಸಾದ್, ಟಿಎಪಿಸಿಎಂಎಸ್ ಅಧ್ಯಕ್ಷ ಚಿಕ್ಕಾಡೆ ಗಿರೀಶ್, ಪುರಸಭೆ ಮಾಜಿ ಅಧ್ಯಕ್ಷರಾದ ಆರ್.ಸೋಮಶೇಖರ್, ಗಿರೀಶ್, ಡೈರಿ ಕಾರ್ಯದರ್ಶಿ ಸಂಘದ ಅಧ್ಯಕ್ಷ ಶಿವಪ್ಪ, ಚಿನಕುರಳಿ ಡೈರಿ ಮಾಜಿ ಅಧ್ಯಕ್ಷ ರಮೇಶ್, ಚಿಕ್ಕಬ್ಯಾಡರಹಳ್ಳಿ ಡೈರಿ ಮಾಜಿ ಅಧ್ಯಕ್ಷ ಸಿ.ಎನ್.ಚಂದನ್, ಮುಖಂಡ ಕಡಬ ಬಲರಾಮೇಗೌಡ, ಬೋರೇಗೌಡ, ಮಾರ್ಗ ವಿಸ್ತರ್ಣಾಧಿಕಾರಿಗಳು, ಕಾರ್ಯದರ್ಶಿಗಳು, ಸಿಬ್ಬಂದಿ ಹಾಜರಿದ್ದರು.

ಹಾರೋಹಳ್ಳಿಯಲ್ಲಿ ಸರ್ಕಾರಿ ಬೀಳು ಭೂಮಿ ಸರ್ವೇ ಕಾರ್ಯ ನಡೆಸಿ ಜಾಗ ಗುರುತು

39 ಗುಂಟೆ ಜಾಗ ಸರ್ಕಾರಕ್ಕೆ, ಗ್ರಾಮಸ್ಥರ ಉಪಯೋಗಕ್ಕೆ 18 ಗುಂಟೆ ಮೀಸಲು

• **ಕನ್ನಡಪ್ರಭ ವಾರ್ತೆ** ಪಾಂಡವಪುರ

ಪಟ್ಟಣದ ಹಾರೋಹಳ್ಳಿ ಸರ್ವೇ ನಂ 21/3ರ ಸರ್ಕಾರಿ ಬೀಳು ಭೂಮಿಯನ್ನು ಶಾಸಕ ದರ್ಶನ್ ಪುಟ್ಟಣ್ಣಯ್ಯರ ಸೂಚನೆ ಮೇರೆಗೆ ಸೋಮವಾರ ಸರ್ವೇ ಕಾರ್ಯ ನಡೆಸಿ 39 ಗುಂಟೆಯಷ್ಟು ಸರ್ಕಾರಿ ಜಾಗವನ್ನು ಗುರುತಿಸಲಾಯಿತು.

ಉಳಿದಂತೆ 18 ಗುಂಟೆ ಹಿಡುವಳಿ ಭೂಮಿ ಇದ್ದು, ಹಾರೋಹಳ್ಳಿ ಗ್ರಾಮಸ್ಥರು ಸಾರ್ವಜನಿಕ ಗ್ರಂಥಾಲಯ, ಉದ್ಯಾನವನ, ಆಟದ ಮೈದಾನ ಸೇರಿ ಇನ್ನಿತರ ಚಟುವಟಿಕೆಗಳಿಗೆ ಉಪಯೋಗವಾಗುವಂತೆ ಬಳಸಿಕೊಳ್ಳಬಹುದು ಎಂದು ರೆವಿನ್ಯೂ ಇನ್ಸ್‌ಪೆಕ್ಟರ್‌ಮಹೇಂದ್ರ ತಿಳಿಸಿದರು.

ತಹಸೀಲ್ದಾರ್‌ಬಸವರೆಡ್ಡೆಪ್ಪ ರೋಣದ ಅವರ ಮೌಖಿಕ ಆದೇಶದ ಮೇರೆಗೆ ಕಸಬಾ ರೆವಿನ್ಯೂ ಇನ್ಸ್‌ಪೆಕ್ಟರ್ ಮಹೇಂದ್ರ, ಗ್ರಾಮ ಲೆಕ್ಕಾಧಿಕಾರಿ ದೇವಮ್ಮಣ್ಣಿ ಹಾಗೂ ಗ್ರಾಮಸ್ಥರ ಸಮ್ಮುಖದಲ್ಲಿ ತಾಲೂಕು ಸರ್ವೇಯರ್ ಸೋಮಶೇಖರ್‌ತಮ್ಮ ಸಿಬ್ಬಂದಿಯೊಂದಿಗೆ, ಸರ್ಕಾರಿ ಬೀಳು ಭೂಮಿಯನ್ನು ಸರ್ವೇ ಕಾರ್ಯ ನಡೆಸಿ ಜಾಗವನ್ನು ಅಳತೆ ಮಾಡಿ ಗಡಿ ಗುರುತಿಸುವ ಕಾರ್ಯ ಮಾಡಿದರು.

ಈ ಹಿಂದೆ ಗ್ರಾಮದ ಸರ್ವೇ ನಂ.4ರ ಸರ್ಕಾರಿ ಗುಂಡುತೋಪಿನ 39 ಗುಂಟೆ ವಿಸ್ತೀರ್ಣದ ಜಾಗವನ್ನು ಸರ್ವೇ ಕಾರ್ಯ ನಡೆಸಿ, ಗಡಿ ಗುರುತಿಸಿ ಕಲ್ಲುನೆಡಲಾಗಿತ್ತು. ಉಳಿದಂತೆ 21/3ರ 39 ಗುಂಟೆ ವಿಸ್ತೀರ್ಣದ ಸರ್ಕಾರಿ ಬೀಳು ಭೂಮಿ ಸರ್ವೇ ಮಾಡಲು ಸೂಕ್ತ ದಾಖಲಾತಿ ದೊರೆಯದಕಾರಣಸರ್ವೇಕಾರ್ಯಮುಂದೂಡಲಾಗಿತ್ತು, ಇದೀಗ ಸರ್ವೇ ಕಾರ್ಯ ನಡೆಸಲಾಯಿತು.

ಗ್ರಾಮದ ಸರ್ಕಾರಿ ತೋಪು ಹಾಗೂ ಸರ್ಕಾರಿ ಬೀಳು ಜಾಗವುಸಾರ್ವಜನಿಕರಅನುಕೂಲಕ್ಕಾಗಿಬಳಕೆಯಾಗಬೇಕು. ಸಾಧ್ಯವಾದಲ್ಲಿ ಆ ಜಾಗದಲ್ಲಿ ಸಾರ್ವಜನಿಕ ಗ್ರಂಥಾಲಯ, ಉದ್ಯಾನವನ, ಆಟದ ಮೈದಾನ ಸೇರಿ ಇನ್ನಿತರ ಗ್ರಾಮಸ್ಥರ ಚಟುವಟಿಕೆಗಳಿಗೆ ಉಪಯೋಗವಾಗುವಂತೆ ತಾಲೂಕು ಆಡಳಿತ ವ್ಯವಸ್ಥೆ ಮಾಡಬೇಕು. ಈ ಜಾಗದ ಪಕ್ಕದ ಹಿಡುವಳಿದಾರರಾದ ಹೋರಾಟಗಾರ ಎಚ್.ಎನ್.ನಾರಾಯಣಗೌಡ ಅವರು ಈ ಹಿಂದೆ ವಾಗ್ದಾನ ಮಾಡಿದಂತೆ ರಸ್ತೆಗೆ 2 ಗುಂಟೆ ಜಮೀನು ಬಿಟ್ಟುಕೊಡಬೇಕು ಎಂದು ಶ್ರೀಲಕ್ಷ್ಮೀನಾರಾಯಣಸ್ವಾಮಿ ದೇವಸ್ಥಾನದ ಜೋರ್ಣೋದ್ಧಾರ ಸಮಿತಿ ಅಧ್ಯಕ್ಷ ಗರಡಿಮನೆ ಚಂದ್ರಶೇಖರ್, ಕಾರ್ಯದರ್ಶಿ ಹರಳಹಳ್ಳಿ ಅಮ್ಮರ ಸತೀಶ್, ಗ್ರಾಮಸ್ಥರಾದ ಎಚ್.ಎಸ್.ಲಕ್ಷ್ಮೀಗೌಡ, ಬಸವರಾಜು, ಲಕ್ಷ್ಮೀಗೌಡ, ಎಚ್.ಆರ್.ಪರಮೇಶ್, ದೊಡ್ಡೈದ್ದಪ್ಪರ ರಾಮೇಗೌಡ, ಎಚ್.ಡಿ.ಶ್ರೀಧರ್, ಪಟೇಲ್ ಕೃಷ್ಣೇಗೌಡ, ಡೈಮಂಡ್ ರವಿ, ಎಚ್.ಎನ್.ಮಂಜುನಾಥ್, ರಘು ಇತರರು ಒತ್ತಾಯಿಸಿದರು.



ಗ್ರಾಮದ ಸ.ನಂ.4ರ ಸರ್ಕಾರಿ ತೋಪಿನ 39 ಗುಂಟೆ ವಿಸ್ತೀರ್ಣ ಜಾಗ ಸೇರಿದಂತೆ ಸರ್ವೇ ನಂ 21/3ರ ಸರ್ಕಾರಿ ಬೀಳು ಭೂಮಿ ಜಾಗವನ್ನು ಸರ್ವೇ ಕಾರ್ಯ ಮಾಡಿಸಿಕೊಟ್ಟ ಶಾಸಕ ದರ್ಶನ್ ಪುಟ್ಟಣ್ಣಯ್ಯ ಹಾಗೂ ತಹಸೀಲ್ದಾರ್ ಬಸವರೆಡ್ಡೆಪ್ಪ ರೋಣದ ಅವರಿಗೆ ಗ್ರಾಮಸ್ಥರು ಅಭಿನಂದನೆ ಸಲ್ಲಿಸಿದರು.

ಮಳವಳ್ಳೀಲಿ ಅಪರಿಚಿತ ಶವ ಪತ್ತೆ

ಮಂಡ್ಯ: ಮಳವಳ್ಳಿ ಟೌನ್ ಪುರಸಭೆ ಹಳೆ ಅಂಗಡಿ ಮಳಿಗೆಗಳ ಬಳಿ ಅಪರಿಚಿತ ಶವ ಪತ್ತೆಯಾಗಿದೆ ಎಂದು ಮಳವಳ್ಳಿ ಟೌನ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಮೃತನ ವಯಸ್ಸು (45-50), ದುಂಡು ಮುಖ, ದೃಢಕಾಯ, ಎಡಗೈಯಲ್ಲಿ ಚಂದ್ರ ಮತ್ತು ಪದ್ಮ, ಬಲಗೈಯಲ್ಲಿ ಮಂಜ ಎಂಬ ಹಸಿರು ಹಚ್ಚೆ ಇದ್ದು ಹಸಿರು ಬಣ್ಣದ ಶರ್ಟ್, ಹಸಿರು ಬಣ್ಣದ ನಿಕ್ಕರ್ ಧರಿಸಿರುತ್ತಾರೆ. ವಾರಸುದಾರರ ಮಾಹಿತಿ ದೊರೆತಲ್ಲಿ ದೂ.ಸಂ.9480804862,9740595732ಸಂಪರ್ಕಿಸಬಹುದು.

ವ್ಯಕ್ತಿ ಕಾಣೆ: ದೂರು ದಾಖಲು

ಮಂಡ್ಯ: ತಾಲೂಕಿನ ಮಾರನಹಳ್ಳಿ ಗ್ರಾಮದ ಮಂಜುಗೌಡ (40) ಎಂಬುವವರು ಕಾಣೆಯಾಗಿದ್ದಾರೆ ಎಂದು ಶಿವಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಕಾಣೆಯಾದ ವ್ಯಕ್ತಿಯು 5 ಅಡಿ ಎತ್ತರ, ಗೋಧಿ ಮೈ ಬಣ್ಣ, ಬಿಳಿ ಬಣ್ಣದ ಅಂಗಿಯನ್ನು ಧರಿಸಿರುತ್ತಾರೆ. ವ್ಯಕ್ತಿಯ ಸುಳಿವು ಸಿಕ್ಕಲ್ಲಿ ದೂ.ಸಂ: 9480804849, 9480804831 ಅನ್ನು ಸಂಪರ್ಕಿಸಬಹುದು ಎಂದು ಶಿವಳ್ಳಿ ಸಬ್ ಇನ್ಸ್‌ಪೆಕ್ಟರ್‌ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೆಂಗಳೂರು ಉತ್ತರ ನಗರ ಪಾಲಿಕೆ
ಕಾರ್ಯಪಾಲಕ ಅಭಿಯಂತರರ ಕಚೇರಿ, ವಲಯ–1,
ಸರ್ವಜ್ಞನಗರ ವಿಭಾಗ, 9ನೇ 'ಸಿ' ಮುಖ್ಯರಸ್ತೆ, ಹೆಚ್‌ಆರ್‌ಬಿಆರ್ ಲೇಔಟ್,
1ನೇ ಬ್ಲಾಕ್, ಕಲ್ಯಾಣನಗರ, ಬೆಂಗಳೂರು – 560043.

ಸಂಖ್ಯೆ: ಕಾಅ/ಎಸ್‌ಜಿಎನ್/ಕೆಪಿಪಿಪಿ/ಟೆಂಡರ್/02/2026–27 ದಿನಾಂಕ: 05–05–2026

ಅಲ್ಪಾವಧಿ ಟೆಂಡರ್ ಆಹ್ವಾನ ಪ್ರಕಟಣೆ (ಎನ್‌ಐಟಿ)
(ದ್ವಿ–ಲಕೋಟೆ ಪದ್ಧತಿ) (ಜಿಓಕೆ ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ ಮಾತ್ರ)

ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ ವಿಭಾಗ), ಬೆಂಉನಪಾ, ವಲಯ–1, ಬೆಂಗಳೂರು ಇವರು ಗ್ರೇಟರ್ ಬೆಂಗಳೂರು ಪ್ರಾಧಿಕಾರದಲ್ಲಿ ನೋಂದಾಯಿತ ಅಥವಾ ಸಿಪಿಡಬ್ಲ್ಯೂಡಿ / ಕೆಪಿಡಬ್ಲ್ಯೂಡಿ / ರೈಲ್ವೇಸ್ / ಎಂಇಎಸ್ / ರಾಷ್ಟ್ರೀಯ ಹೆದ್ದಾರಿ ಅಥವಾ ಯಾವುದೇ ರಾಜ್ಯ ಸರ್ಕಾರದ ಸಂಸ್ಥೆಗಳಲ್ಲಿ ತತ್ಸಮಾನ ನೋಂದಾಯಿಸಿರುವ ಅರ್ಹ ಗುತ್ತಿಗೆದಾರರಿಂದ ಈ ಕೆಳಕಂಡ ನಿರ್ಮಾಣ ಕಾಮಗಾರಿಗಳಿಗಾಗಿ ಟೆಂಡರ್‌ಗಳನ್ನು ಆಹ್ವಾನಿಸಿದ್ದಾರೆ.
(ಸ್ಟ್ಯಾಂಡರ್ಡ್ ಟೆಂಡರ್ ಡಾಕ್ಯೂಮೆಂಟ್–ಕೆಡಬ್ಲ್ಯೂ–1, ಕೆಡಬ್ಲ್ಯೂ–2 & ಕೆಡಬ್ಲ್ಯೂ–3)

ಕ್ರ ಸಂ.	ಕಾಮಗಾರಿಯ ಹೆಸರು / ಪ್ರವರ್ಗ
1	ವಾರ್ಡ್ ಸಂಖ್ಯೆ. 22, ನಾಗವಾರದಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. **(ಪ್ರವರ್ಗ–11(ಎ)) – ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 25,000/–**
2	ವಾರ್ಡ್ ಸಂಖ್ಯೆ. 23, ಹೆಣ್ಣೂರುನಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. **(ಇತರೆ) – ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 50,000/–**
3	ವಾರ್ಡ್ ಸಂಖ್ಯೆ. 24, ಹೆಚ್‌ಬಿಆರ್ ಲೇಔಟ್‌ನಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. **(ಪ್ರವರ್ಗ–11(ಎ)) – ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 25,000/–**
4	ವಾರ್ಡ್ ಸಂಖ್ಯೆ. 25, ಗೋವಿಂದಪುರದಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. **(ಎಸ್.ಟಿ) – ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 25,000/–**
5	ವಾರ್ಡ್ ಸಂಖ್ಯೆ. 28, ವೆಂಕಟೇಶಪುರಂನಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. **(ಇತರೆ) – ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 50,000/–**
6	ವಾರ್ಡ್ ಸಂಖ್ಯೆ. 29, ಲಿಂಗರಾಜಪುರದಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. **(ಇತರೆ) – ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 50,000/–**
7	ವಾರ್ಡ್ ಸಂಖ್ಯೆ. 30, ಕಚಾರಕನಹಳ್ಳಿಯಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. **(ಇತರೆ) – ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 50,000/–**
8	ವಾರ್ಡ್ ಸಂಖ್ಯೆ. 31, ಕಲ್ಯಾಣನಗರದಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. **(ಎಸ್.ಸಿ) – ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 25,000/–**
9	ವಾರ್ಡ್ ಸಂಖ್ಯೆ. 32, ಬಾಣಸವಾಡಿಯಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. **(ಇತರೆ) – ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 50,000/–**
10	ವಾರ್ಡ್ ಸಂಖ್ಯೆ. 33, ಹೆಚ್‌ಆರ್‌ಬಿಆರ್ ಲೇಔಟ್‌ನಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. **(ಎಸ್.ಸಿ) – ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 25,000/–**
11	ವಾರ್ಡ್ ಸಂಖ್ಯೆ. 34, ಸುಬ್ಬಯ್ಯನಪಾಳ್ಯದಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. **(ಪ್ರವರ್ಗ–11(ಎ)) – ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 25,000/–**
12	ವಾರ್ಡ್ ಸಂಖ್ಯೆ. 35, ಕಮ್ಮನಹಳ್ಳಿಯಲ್ಲಿ ಪಾದಚಾರಿ ಮಾರ್ಗಗಳ ದುರಸ್ತಿ ಮತ್ತು ನಿರ್ವಹಣೆ ಕಾಮಗಾರಿ. **(ಪ್ರವರ್ಗ–11(ಎ)) – ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 25,000/–**
13	ವಾರ್ಡ್ ಸಂಖ್ಯೆ. 82, ಬಾಣಸವಾಡಿ ಇಲ್ಲಿನ 10ನೇ ಮುಖ್ಯರಸ್ತೆ, ಹೆಚ್‌ಆರ್‌ಬಿಆರ್ ಲೇಔಟ್‌ನ 1ನೇ ಬ್ಲಾಕ್ ಮತ್ತು ಸುತ್ತುಮುತ್ತ ಪ್ರದೇಶದ ರಸ್ತೆಗಳಲ್ಲಿ ಡಾಂಬರೀಕರಣ ಒದಗಿಸುವ ಕಾಮಗಾರಿ. **(ಇತರೆ) – ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 50.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 1,00,000/–**
14	ವಾರ್ಡ್ ಸಂಖ್ಯೆ. 85, ಮಾರುತಿ ಸೇವಾ ನಗರ ಇಲ್ಲಿನ ಮುನಿಗ ಲೇಔಟ್ ಮತ್ತು ಸುತ್ತುಮುತ್ತ ಪ್ರದೇಶದಲ್ಲಿ ರಸ್ತೆಗಳು ಹಾಗೂ ಚರಂಡಿಗಳ ಸುಧಾರಣೆಗಳ ಕಾಮಗಾರಿ. **(ಎಸ್.ಸಿ) – ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 50.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 50,000/–**
15	ವಾರ್ಡ್ ಸಂಖ್ಯೆ. 77, ನಾಗವಾರ ಇಲ್ಲಿನ ಗೋವಿಂದಪುರದ 14ನೇ ಅಡ್ಡರಸ್ತೆ ಮತ್ತು ಸುತ್ತುಮುತ್ತ ಪ್ರದೇಶದಲ್ಲಿ ರಸ್ತೆಗಳು ಹಾಗೂ ಚರಂಡಿಗಳ ಸುಧಾರಣೆಗಳ ಕಾಮಗಾರಿ. **(2ನೇ ಕರೆ) – (ಪ್ರವರ್ಗ–11(ಎ)) – ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 50.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 50,000/–**
16	ವಾರ್ಡ್ ಸಂಖ್ಯೆ. 81, ಕಮ್ಮನಹಳ್ಳಿ ಇಲ್ಲಿನ 5ನೇ ಮುಖ್ಯರಸ್ತೆ ಮತ್ತು ಸುತ್ತುಮುತ್ತ ಪ್ರದೇಶದ ರಸ್ತೆಗಳಲ್ಲಿ ಡಾಂಬರೀಕರಣ ಒದಗಿಸುವ ಕಾಮಗಾರಿ. **(2ನೇ ಕರೆ) – (ಪ್ರವರ್ಗ–11(ಎ)) – ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 50.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 50,000/–**
17	ವಾರ್ಡ್ ಸಂಖ್ಯೆ. 82, ಬಾಣಸವಾಡಿಯಲ್ಲಿ ಹೊಸ ಕಲ್ವರ್ಟ್‌ಗಳ ನಿರ್ಮಾಣ ಕಾಮಗಾರಿ. **(2ನೇ ಕರೆ) – (ಎಸ್.ಟಿ) – ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 10.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 12,500/–**
18	ವಾರ್ಡ್ ಸಂಖ್ಯೆ. 80, ಕಚಾರಕನಹಳ್ಳಿ ಇಲ್ಲಿನ ಹೆಚ್‌ಆರ್‌ಬಿಆರ್ ಲೇಔಟ್‌ನ 3ನೇ ಬ್ಲಾಕ್ ಹಾಗೂ ರಾಮಯ್ಯ ಲೇಔಟ್ ಮತ್ತು ಸುತ್ತುಮುತ್ತ ಪ್ರದೇಶದ ರಸ್ತೆಗಳಲ್ಲಿ ಡಾಂಬರೀಕರಣ ಒದಗಿಸುವ ಕಾಮಗಾರಿ. **ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ): 75.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ): 1,50,000/– (ರೂ. 1.00 ಲಕ್ಷ ಇ–ಪಾವತಿ ಮೂಲಕ ಬಾಕಿ ರೂ. 50,000/– ಬಿಜಿ / ಎಫ್‌ಡಿಆರ್ ಮೂಲಕ ತಾಂತ್ರಿಕ ಬಿಡ್ ತೆರೆಯುವ ಮೊದಲು ಸಲ್ಲಿಸಬೇಕು)**

ಟೆಂಡರ್ ವೇಳಾಪಟ್ಟಿ: 1) ಟೆಂಡರ್ ಡಾಕ್ಯೂಮೆಂಟ್‌ಗಳನ್ನು ಜಿಓಕೆ ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ವೆಬ್‌ಸೈಟ್: **https://kppp.karnataka.gov.in** ನಲ್ಲಿ ದಿನಾಂಕ: **11–05–2026** ರಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. 2) ಬಿಡ್ ಪೂರ್ವಭಾವಿ ಸಭೆಯು ದಿನಾಂಕ: **16–05–2026 ರ ಬೆಳಿಗ್ಗೆ 11.00 ಗಂಟೆಗೆ ಕಾರ್ಯಪಾಲಕ ಅಭಿಯಂತರರ ಕಚೇರಿ, ಬಿಡಿಎ ಕಟ್ಟಡ, 9ನೇ 'ಸಿ' ಮುಖ್ಯರಸ್ತೆ, ಹೆಚ್‌ಆರ್‌ಬಿಆರ್ ಲೇಔಟ್, 1ನೇ ಬ್ಲಾಕ್, ಬಾಣಸವಾಡಿ, ಬೆಂಗಳೂರು ಇಲ್ಲಿ ನಡೆಯುವುದು.** 3) ಭರ್ತಿ ಮಾಡಿದ ಟೆಂಡರ್ ಡಾಕ್ಯೂಮೆಂಟ್‌ನ್ನು ಸಲ್ಲಿಸುವ ಕೊನೆಯ ದಿನಾಂಕ: **22–05–2026 ರಂದು ಸಂಜೆ 4.00 ಗಂಟೆವರೆಗೆ.** 4) ಟೆಂಡರ್‌ಗಳನ್ನು ತೆರೆಯುವ ದಿನಾಂಕ: **25–05–2026 ರಂದು ಬೆಳಿಗ್ಗೆ 11.30 ಗಂಟೆಗೆ (ಸಾಧ್ಯವಾದಲ್ಲಿ ಅಥವಾ ಮುಂದಿನ ಕೆಲಸದ ದಿನದಂದು).** ಹೆಚ್ಚಿನ ಮಾಹಿತಿಗಾಗಿ ಮೇಲ್ಕಂಡ ಕಚೇರಿಯನ್ನು ಸಂಪರ್ಕಿಸಬಹುದು.

ಸಹಿ/– ಕಾರ್ಯಪಾಲಕ ಅಭಿಯಂತರರು
ಸರ್ವಜ್ಞನಗರ ವಿಭಾಗ, ವಲಯ–1, ಬೆಂಉನಪಾ.

IN THE COURT OF CITY CIVIL AND SESSION JUDGE AT BENGALURU
OS No. 4349 of 2023

Between :
M/s. Karnataka State Handicrafts Development Corporation Limited, Registered office at No. 39, United Mansion, 2nd Floor, M.G. Road, Bengaluru-560 001- Rep. by its Managing Director Smt. Bharathi
...Plaintiff

AND
Sri. G.C. Kishore Kumar & Others
...Defendants

SUMMON TO DEFENDANT No. 1, 5, 6, 7 and 8
(U/o 5 Rule of 20 of cpc)

1. Sri. G.C. Kishore Kumar
S/o Chikkaveranna, Major by age 56 Years, No. 542, Sonika Shelter, 2nd Floor, 4th Cross, 5th Main Road, in front of Mahatma Gandhi Park, Malagala, Nagarabhavi 2nd Stage, Bengaluru.

5. Sri. H.S. Nagalingaswamy,
S/o. Late Shivanna, Major by age 53 Years, Resident of D. Halasalli Village, Kasaba Hobli, Dhanaguru Post, Malavalli Taluk, Mandya District.

6. Sri. R. Raviraj,
S/o S.R. Raju, Major By age 62 Years, Residing at No. 42, 1st Main Road, 7th Cross Road, Raghavendra Block, Srinagar, Bengaluru.

7. Sri. Narasaiah D,
S/o Devadhanam, Major by Age 58 Years, Proprietor, PNP Enterprises, No. 70, Grace Tower, Millers Road, Bengaluru-560046.

8. PNP Enterprises,
A Proprietary Concern, No. 70, Grace Tower, Millers Road, Bengaluru-560046 Represented by its proprietor Sri. Narasaiah D

Whereas. the Plaintiff Corporation has filed the above suit against the Defendants for recovery of Rs. 25,83,60,294/- from the Defendants along interest and for other consequential reliefs.

That the Defendant No. 1, 5, 6, 7 and 8 are hereby summoned to appear in person or by pleader on **19.06.2026 at 11.00 A.M.** in the Court Hall No. 40, to answer the same, the case will be disposed of exparte.

Given under my hand and seal on this 2nd May 2026 at Bengaluru.

By the order of the Court
Senior Sheristedar,
City Civil Court, Bengaluru.

Advocate for Plaintiff:
B.S. Venkatanarayana & Devaraja L, No. T-3, 27/1, Shalimar Plaza, 10th Cross, Palace Guttahalli Main Road, Malleshwaram, Bengaluru- 560 003.

ಕಾರಾಗೃಹ ಮತ್ತು ಸುಧಾರಣಾ ಸೇವೆ ಇಲಾಖೆ
ಮುಖ್ಯ ಅಧೀಕ್ಷಕರ ಕಾರ್ಯಾಲಯ, ಕೇಂದ್ರ ಕಾರಾಗೃಹ
ಪರಪ್ಪನ ಅಗ್ರಹಾರ, ಎಲೆಕ್ಟ್ರಾನಿಕ್ ಸಿಟಿ ಪೋಸ್ಟ್, ಬೆಂಗಳೂರು–560100,

ಸಂ.: ಕೇಕಾಬೆಂ/ದರಖಾಸ್ತು/1466/2026–27 ದಿನಾಂಕ: 05.05.2026

ಅಲ್ಪಾವಧಿ ಇ–ಟೆಂಡರ್ ನೋಟಿಸ್

2026–27ನೇ ಸಾಲಿಗೆ ಬೆಂಗಳೂರು ಕೇಂದ್ರ ಕಾರಾಗೃಹಕ್ಕೆ ಅವಶ್ಯವಿರುವ ಸಿ.ಸಿ.ಟಿ.ವಿ., ಎಕ್ಸ್–ರೇ ಬ್ಯಾಗೇಜ್ ಸ್ಕ್ಯಾನರ್‌ಗಳು, ಕಂಪ್ಯೂಟರ್ ಮತ್ತು ಪ್ರಿಂಟರ್‌ಗಳನ್ನು ಖರೀದಿಸುವ ಸಲುವಾಗಿ ಕೆ.ಟಿ.ಪಿ.ಪಿ ಕಾಯ್ದೆ ಮತ್ತು ನಿಯಮದನ್ವಯ ಅಲ್ಪಾವಧಿ ಇ–ದರಖಾಸ್ತು ಮೂಲಕ ಖರೀದಿಸಲು ನಿರ್ಧರಿಸಿದೆ.

ಕ್ರ ಸಂ.	ಟೆಂಡರ್ ಇಂಡೆಂಟ್ ಸಂಖ್ಯೆ	ದರಖಾಸ್ತು ವಿವರ
1	ಇ–ಪೋರ್ಟಲ್‌ನಂತೆ PCSD/2026-27/ IND0267	ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ಎ.ಐ ಸಾಮರ್ಥ್ಯದ ಐ.ಪಿ ಬೇಸಡ್ ಸಿ.ಸಿ.ಟಿ.ವಿ ಸಿಸ್ಟಮ್ ಅಳವಡಿಸುವ ಬಗ್ಗೆ.
2	ಇ–ಪೋರ್ಟಲ್‌ನಂತೆ PCSD/2026-27/ IND0268	ಬೆಂಗಳೂರು ಕೇಂದ್ರ ಕಾರಾಗೃಹಕ್ಕೆ ಕಂಪ್ಯೂಟರ್ ಮತ್ತು ಪ್ರಿಂಟರ್‌ಗಳನ್ನು ಖರೀದಿಸುವ ಬಗ್ಗೆ.
3	ಇ–ಪೋರ್ಟಲ್‌ನಂತೆ PCSD/2026-27/ IND0269	ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ಎಕ್ಸ್–ರೇ ಬ್ಯಾಗೇಜ್ ಸ್ಕ್ಯಾನರ್ ಖರೀದಿಸುವ ಬಗ್ಗೆ.

ಇ.ಎಂ.ಡಿ ಮೊತ್ತ (ರೂ.ಗಳಲ್ಲಿ): ಇ–ಪೋರ್ಟಲ್‌ನಂತೆ. **ಬಿಡ್ ಸಲ್ಲಿಸಲು ಕೊನೆಯ ದಿನಾಂಕ:** ಇ–ಪೋರ್ಟಲ್‌ನಂತೆ. ದರಖಾಸ್ತುದಾರರು ಹೆಚ್ಚಿನ ಮಾಹಿತಿಯನ್ನು **kppp.karnataka.gov.in or Helpline No. +91-8046010000, +91-8068948777** ಗಳಿಗೆ ಸಂಪರ್ಕಿಸಿ ಪಡೆಯಬಹುದಾಗಿದೆ.

ಸಹಿ/– ಮುಖ್ಯ ಅಧೀಕ್ಷಕರು
ಕೇಂದ್ರ ಕಾರಾಗೃಹ, ಬೆಂಗಳೂರು.
DIPR/CP/503/SA/2026-27

ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ವಿಜಯಪುರ.
ಕುಲಸಚಿವರ ಕಛೇರಿ, ಜ್ಞಾನ–ಶಕ್ತಿ ಆವರಣ (ತೊರವಿ)
ದೂರವಾಣಿ: 08352–297068, ವೆಬ್‌ಸೈಟ್:www.kswu.ac.in
No:KSAWUV/EXAM/E-Tender/2026-27/323 Date: 30.04.2026

ಅಲ್ಪಾವಧಿ ಟೆಂಡರ್ ಅಧಿಸೂಚನೆ ಪ್ರಕಟಣೆ

ಕರ್ನಾಟಕ ಸರ್ಕಾರದ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಆಧ್ಯಾದೇಶ 1992–2000ರ ಪ್ರಕಾರ ಅಧಿನಿಯಮ 2000ರ ನಿಯಮದಂತೆ ನೊಂದಾಯಿತ ಅರ್ಹ ಗುತ್ತಿಗೆದಾರರಿಂದ ಇ–ಪ್ರಾಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಟೆಂಡರನ್ನು ಈ ಕೆಳಕಂಡ ಸಹಿ ಮಾಡಿರುವವರು ಆಹ್ವಾನಿಸಿರುತ್ತಾರೆ.
ಉಳಿದ ವಿವರಗಳನ್ನು ಗುತ್ತಿಗೆ ದಸ್ತಾವೇಜುಗಳಲ್ಲಿ ನೋಡಬಹುದು.

01. ಕಾಮಗಾರಿಯ ಹೆಸರು: Printing and Supply of Theory Answer Booklets to Karnataka State Akkamahadevi Womens University Vijayapura. ಟೆಂಡರ ಮೊತ್ತ ರೂ. 1,48,80,000/–. ಟೆಂಡರ್ ಸಂಖ್ಯೆ: KSWU/2025-26/IND 0024/Call-2. ಬಡ್ಡಿ ರಹಿತ ಇ.ಎಂ.ಡಿ ರೂ. 2,23,500/–. ಅವಧಿ: 365 ದಿನಗಳು.

ಹೆಚ್ಚಿನ ವಿವರ / ವಿಚಾರಣೆಗೆ ಇ–ಪ್ರಾಕ್ಯೂರ್‌ಮೆಂಟ್ http://kppp.karnataka.gov.in ನಿಂದ ಟೆಂಡರ್ ದಾಖಲಾತಿಗಳನ್ನು ಡೌನಲೋಡ್ ಮಾಡಿಕೊಳ್ಳಬಹುದಾಗಿದೆ. ಏಜೆನ್ಸಿದಾರರ ಅರ್ಹತೆ / ಟೆಂಡರಿನ ನಿಯಮ/ ಟೆಂಡರ್ ಪ್ರೋಸೆಸ್ಸಿಂಗ್ ಶುಲ್ಕ, ತುಂಬುವ ವಿಧಾನ ಇತ್ಯಾದಿ ವಿವರಗಳಿಗೆ http://kppp.karnataka.gov.in ಮೂಲಕ ಮಾಹಿತಿಯನ್ನು ಪಡೆಯಬಹುದು. ಹೆಚ್ಚಿನ ಮಾಹಿತಿಯನ್ನು ಸದರಿ ಕಛೇರಿಯಿಂದ ಹಾಗೂ ಸಹಾಯಕ ದೂರವಾಣಿ ಸಂಖ್ಯೆ:08352–297068, 8722116613 ರಿಂದ ಪಡೆಯಬಹುದು.

ಸಹಿ/– ಕುಲಸಚಿವರು,
ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ
ವಾಸಾಸಂಇ/ವಿಜಯಪುರ/77/ಕೆಎಸ್‌ಎಂಸಿಎ/2026–27

ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ
(ಕರ್ನಾಟಕ ಸರ್ಕಾರದ ಉದ್ಯಮ)
ಕಾರ್ಯಪಾಲಕ ಇಂಜಿನಿಯರ್ ರವರ ಕಛೇರಿ, ವಿಜನಿನಿ ಎತ್ತಿನಹೊಳೆ ಯೋಜನಾ ವಿಭಾಗ, ನಂ:4
ಮಧುಗಿರಿ, ತುಮಕೂರು ಜಿಲ್ಲೆ.–572132,
ದೂ ಸಂಖ್ಯೆ: 08137–282112 Email:eeyetmadhugiri4@gmail.com
ಕ್ರ.ಸಂ:ಕಾಇಂ/ವಿಜನಿನಿ/ಎಹೊಯೋ/ಮ/ವಿ.04/ಟೆ.ಅ–04&05/2026–27 ದಿನಾಂಕ : 24.04.2026

ಅಲ್ಪಾವಧಿ ಟೆಂಡರ್ ಪ್ರಕಟಣೆ (ಕೆ.ಪಿ.ಪಿ–ಪ್ರೊಕ್ಯೂರ್‌ಮೆಂಟ್ ಮುಖಾಂತರ)

ವ್ಯವಸ್ಥಾಪಕ ನಿರ್ದೇಶಕರು, ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ. ಬೆಂಗಳೂರು ಇವರ ಪರವಾಗಿ ಈ ಕೆಳಗೆ ಸಹಿ ಮಾಡಿರುವವರಿಂದ ಕರ್ನಾಟಕ ಸರ್ಕಾರದ ಇ–ಪ್ರೊಕ್ಯೂರ್‌ಮೆಂಟ್ 2.0 ಪೋರ್ಟಲ್‌ನಲ್ಲಿ ಮಧುಗಿರಿ ವಿಭಾಗ ವ್ಯಾಪ್ತಿಯಲ್ಲಿ ಟೆಂಡರ್ ಅಧಿಸೂಚನೆ 04/2026–27 ದಿನಾಂಕ 29.04.2026ರಲ್ಲಿ ಎತ್ತಿನಹೊಳೆ ಯೋಜನೆಯಡಿ ರೂ.3089.65 ಲಕ್ಷದ ಸ್ವಿಚ್ಚಿಂಗ್ ಸ್ಟೇಷನ್ ಕಾಮಗಾರಿ ಹಾಗೂ ಟೆಂಡರ್ ಅಧಿಸೂಚನೆ 05/2026–27 ದಿನಾಂಕ : 29.04.2026 ರಲ್ಲಿ ನೆಲಮಂಗಲ ವಿಧಾನ ಸಭಾ ಕ್ಷೇತ್ರದ 02 ಕಾಮಗಾರಿಗಳಿಗೆ **ರೂ.253.40 & ರೂ.295.74** ಲಕ್ಷಗಳಿಗೆ ಟೆಂಡರ್ ಅಹ್ವಾನಿಸಲಾಗಿರುತ್ತದೆ. ಸದರಿ ಕಾಮಗಾರಿಗಳಿಗೆ Percentage Tender ಮೂಲಕ ಅರ್ಹ ಬಿಡ್ಡುದಾರರಿಂದ ಶೇಕಡಾವಾರು ದರಗಳ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ಇ–ಪ್ರೊಕ್ಯೂರ್‌ಮೆಂಟ್‌ನ https://kppp.karnataka.gov.in ವೆಬ್ ಸೈಟ್ ಮೂಲಕ ಟೆಂಡರ್‌ಗಳನ್ನು ಸಲ್ಲಿಸಬಹುದಾದ ದಿನಾಂಕಗಳ ವಿವರ ಈ ಕೆಳಗಿನಂತಿದೆ.

ಕ್ರಸಂ	ಘಟನೆಗಳ ಕ್ಯಾಲೆಂಟರ್	ಟೆಂಡರ್ ಅಧಿಸೂಚನೆ:04/2026–27 ದಿನಾಂಕ: 29.04.2026 ರ ದಿನಾಂಕಗಳ ವಿವರ	ಟೆಂಡರ್ ಅಧಿಸೂಚನೆ:05/2026–27 ದಿನಾಂಕ: 29.04.2026ರ ದಿನಾಂಕಗಳ ವಿವರ
1	ಇ–ಪ್ರೊಕ್ಯೂರ್‌ಮೆಂಟ್ ನ https://kppp.karnataka.gov.in ವೆಬ್ ಸೈಟ್ ಮೂಲಕ ಟೆಂಡರ್‌ಗಳನ್ನು ಸಲ್ಲಿಸಬಹುದಾದ ದಿನಾಂಕ	02.05.2026 ರಿಂದ 11.05.2026 ಸಂಜೆ 5:00 ಗಂಟೆಯವರೆಗೆ	04.05.2026 ರಿಂದ 14.05.2026 ಸಂಜೆ 5:30 ಗಂಟೆಯವರೆಗೆ
2	ಕೆಪಿಪಿ–ಪೋರ್ಟಲ್ ಮೂಲಕ ಪೂರ್ಣಗೊಂಡ ಟೆಂಡರ್ ದಾಖಲೆಗಳನ್ನು ಸಲ್ಲಿಸಲು ಕೊನೆಯ ದಿನಾಂಕ.	11.05.2026 ಸಂಜೆ 5:00 ಗಂಟೆಯವರೆಗೆ	14.05.2026 ಸಂಜೆ 5:00 ಗಂಟೆಯವರೆಗೆ
3	ಕಾಮಗಾರಿಗಳ ಟೆಂಡರ್‌ಗಿಟ್ಟ ಮೊತ್ತ, ನಿಗದಿಪಡಿಸಿದ ಇ.ಎಂ.ಡಿ ಮೊತ್ತ, ಬಿಡ್ಡುದಾರರ ದರ್ಜೆ, ಟೆಂಡರ್ ನಿಯಮ, ಟೆಂಡರ್ ಪ್ರೋಸೆಸಿಂಗ್ ಶುಲ್ಕ ಇತ್ಯಾದಿ ವಿವರಗಳನ್ನು ಪಡೆಯಬಹುದಾದ ದಿನಾಂಕ	06.05.2026 ರ ಸಂಜೆ 3:00 ಗಂಟೆಯವರೆಗೆ	08.05.2026 ರ ಸಂಜೆ 3:00 ಗಂಟೆಯವರೆಗೆ
4	ಪ್ರಿ–ಬಿಡ್ ಮೀಟಿಂಗ್,	06.05.2026 ರಂದು ಬೆಳಗ್ಗೆ 11.00ಗಂಟೆಗೆ ಸ್ಥಳ: ವ್ಯವಸ್ಥಾಪಕ ನಿರ್ದೇಶಕ, ವಿಜನಿನಿ ಕಛೇರಿ, ಎಂಬಸ್ಸಿ ಸ್ಕ್ವಯರ್, ಬೆಂಗಳೂರು	08.05.2026ರಂದು ಬೆಳಗ್ಗೆ 11.00ಗಂಟೆಗೆ ಸ್ಥಳ: ಕಾರ್ಯಪಾಲಕ ಇಂಜಿನಿಯರ್, ಎತ್ತಿನಹೊಳೆ ಯೋಜನಾ, ವಿಭಾಗ ನಂ.4 ಮಧುಗಿರಿ ರವರ ಕಛೇರಿಯಲ್ಲಿ.
5	ತಾಂತ್ರಿಕ ಬಿಡ್ ಅನ್ನು ಕಾರ್ಯಪಾಲಕ ಇಂಜಿನಿಯರ್, ಎತ್ತಿನಹೊಳೆ ಯೋಜನಾ, ವಿಭಾಗ ನಂ.4 ಮಧುಗಿರಿ ರವರ ಕಛೇರಿಯಲ್ಲಿ ತೆರೆಯುವ ದಿನಾಂಕ	13.05.2026 ರಂದು ಬೆಳಿಗ್ಗೆ 11:00 ಗಂಟೆಗೆ	14.05.2026 ರಂದು ಬೆಳಿಗ್ಗೆ 11:00 ಗಂಟೆಗೆ
6	ಆರ್ಥಿಕ ಬಿಡ್ ಅನ್ನು ಕಾರ್ಯಪಾಲಕ ಇಂಜಿನಿಯರ್, ಎತ್ತಿನಹೊಳೆ ಯೋಜನಾ, ವಿಭಾಗ ನಂ.4 ಮಧುಗಿರಿ ರವರ ಕಛೇರಿಯಲ್ಲಿ ತೆರೆಯುವ ದಿನಾಂಕ	ತಾಂತ್ರಿಕ ಬಿಡ್ ಗೆ ಅನುಮೋದನೆ ದೊರೆತ ನಂತರ	ತಾಂತ್ರಿಕ ಬಿಡ್ ಗೆ ಅನುಮೋದನೆ ದೊರೆತ ನಂತರ

ಟೆಂಡರ್‌ಗಳನ್ನು ಸ್ವೀಕರಿಸುವ ಅಧಿಕಾರಿಯು ಯಾವುದೇ ಕಾರಣ ನೀಡದೆ ಯಾವುದೇ ಟೆಂಡರ್‌ಗಳನ್ನು ಅಥವಾ ಎಲ್ಲಾ ಟೆಂಡರ್‌ಗಳನ್ನು ತಿರಸ್ಕರಿಸುವ ಅಧಿಕಾರವನ್ನು ಹೊಂದಿರುತ್ತಾರೆ.

ಸಹಿ/– ಕಾರ್ಯಪಾಲಕ ಇಂಜಿನಿಯರ್,
ವಿಜನಿನಿ, ಎತ್ತಿನಹೊಳೆ ಯೋಜನಾ ವಿಭಾಗ ನಂ.4, ಮಧುಗಿರಿ
DIPR/TUM/55/KSMCA/2026-27